ವಿಜಯಪುರ | ಸಂಪುಟ 04 | ಸಂಚಿಕೆ 188 | ಪುಟ 04 | ₹ 3.00 https://udayarashminews.com udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಅಗಸ್ಟ್, 18, 2026

"ಕೇವಲ 10 ಲಕ್ಷ ರೂ. ಹೂಡಿಕೆಯೊಂದಿಗೆ ಪ್ರಾರಂಭವಾದ ಸಕ್ಕರೆ ಕಾರ್ಖಾನೆ, ಇಂದು 25,000 ಕೋಟಿ ರೂ. ಬಂಡವಾಳದ ಬೃಹತ್ ಉದ್ಯಮವಾಗಿ ಬೆಳೆದಿದೆ. ಪ್ರಸ್ತುತ ನಮ್ಮ ಸಂಸ್ಥೆಯಲ್ಲಿ 72,000 ಕ್ಕೂ ಹೆಚ್ಚು ಜನ ಉದ್ಯೋಗ ಮಾಡುತ್ತಿದ್ದಾರೆ. ಮುಂದಿನ ಎರಡು ವರ್ಷಗಳಲ್ಲಿ ನಿರಾಣಿ ಗ್ರೂಪ್ ಒಟ್ಟು ಒಂದು ಲಕ್ಷ ಜನರಿಗೆ ಉದ್ಯೋಗ ನೀಡುವ ಗುರಿ ಹೊಂದಲಾಗಿದೆ"



■ ಮುರುಗೇಶ್ ನಿರಾಣಿ
ಬಿಜೆಪಿ ರಾಜ್ಯ ಉಪಾಧ್ಯಕ್ಷ ಹಾಗೂ ಮಾಜಿ ಸಚಿವರು

# ಸಿಂದಗಿ-ಆಲಮೇಲ ತಾಲೂಕುಗಳು ಬರಪೀಡಿತವೆಂದು ಘೋಷಣೆ


■ ಉದಯರಶ್ಮಿ ದಿನಪತ್ರಿಕೆ



**ಸಿಂದಗಿ ಮತಕ್ಷೇತ್ರದ ಶಾಸಕ ಅಶೋಕ ಮನಗೂಳಿ ಯಿಂದ ಪತ್ರಿಕಾ ಪ್ರಕಟಣೆ**

ಸಿಂದಗಿ: ಕೇಂದ್ರ ಸರ್ಕಾರದ ನಿಯಮಾವಳಿಗಳನ್ವಯ ರಾಜ್ಯ ಸರ್ಕಾರವು ಸಿಂದಗಿ ಹಾಗೂ ಆಲಮೇಲ ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಿದೆ ಎಂದು ಶಾಸಕ ಅಶೋಕ ಮನಗೂಳಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಅವರು, ಪ್ರಸಕ್ತ ವರ್ಷ ಸಿಂದಗಿ ಹಾಗೂ ಆಲಮೇಲ ತಾಲೂಕುಗಳು ತೀವ್ರ ಮಳೆ ಕೊರತೆಯನ್ನು ಎದುರಿಸಿದ್ದು, ಇದರಿಂದ ಎರಡೂ ತಾಲೂಕುಗಳ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕಾಲಕಾಲಕ್ಕೆ ಲಭ್ಯವಾಗುವ ಸ್ಯಾಟಲೈಟ್ ಮಾಹಿತಿ ಸೇರಿದಂತೆ ಕೇಂದ್ರ ಸರ್ಕಾರದ ನಿಯಮಾವಳಿಗಳಲ್ಲಿ ನಿಗದಿಪಡಿಸಿರುವ ವಿವಿಧ ಮಾನದಂಡಗಳ ಆಧಾರದ ಮೇಲೆ ರಾಜ್ಯ ಸರ್ಕಾರ ಬರಪೀಡಿತ ತಾಲೂಕುಗಳನ್ನು ಘೋಷಿಸಿದೆ. ಅದರಂತೆ ಸಿಂದಗಿ ತಾಲೂಕನ್ನು ತೀವ್ರ ಬರಪೀಡಿತ ತಾಲೂಕು ಹಾಗೂ ಆಲಮೇಲ ತಾಲೂಕನ್ನು ಮಧ್ಯಮ ಬರಪೀಡಿತ ತಾಲೂಕು ಎಂದು ವರ್ಗೀಕರಿಸಲಾಗಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಅವರ ನೇತೃತ್ವದಲ್ಲಿ ಸರ್ಕಾರ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ರೈತರ ಸಂಕಷ್ಟಕ್ಕೆ ಸ್ಪಂದಿಸುವುದು ಸರ್ಕಾರದ ಆದ್ಯತೆಯಾಗಿದ್ದು, ರೈತರ ಹಿತಾಸಕ್ತಿಯನ್ನು ಕಾಪಾಡಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಬದ್ಧವಾಗಿದೆ. ಬರಪೀಡಿತ ತಾಲೂಕುಗಳ ಘೋಷಣೆಗೆ ಆಗ್ರಹಿಸಿ ವಿವಿಧ ತಾಲೂಕುಗಳಲ್ಲಿ ರೈತ ಸಂಘಟನೆಗಳು ನಡೆಸುತ್ತಿರುವ ಹೋರಾಟಗಳನ್ನು ಸ್ಥಗಿತಗೊಳಿಸುವಂತೆ ಶಾಸಕ ಅಶೋಕ ಮನಗೂಳಿ ಮನವಿ ಮಾಡಿದ್ದಾರೆ.




# ಸೆ.30 ರೊಳಗೆ ಇಂಡಿ ತಾಲೂಕು ಬರಪೀಡಿತವೆಂದು ಘೋಷಣೆ ಸಾಧ್ಯತೆ

■ ಉದಯರಶ್ಮಿ ದಿನಪತ್ರಿಕೆ

**ಅಧಿಕಾರಿಗಳ ಸಭೆಯಲ್ಲಿ ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ಭರವಸೆ**

ಇಂಡಿ: ಇಂಡಿ ತಾಲೂಕನ್ನು ಬರಗಾಲವನ್ನಾಗಿ ಸರಕಾರ ಸೆ.30 ರೊಳಗೆ ಘೋಷಿಸುವ ಸಾಧ್ಯತೆ ಇದೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು.

ನಗರದ ತಾ.ಪಂ ಸಭಾಭವನದಲ್ಲಿ ಎಲ್ಲ ಅಧಿಕಾರಿಗಳಿಂದ ನಡೆದ ಕುಡಿಯುವ ನೀರಿನ ಕುರಿತು ಚರ್ಚೆಯಲ್ಲಿ ಮಾತನಾಡಿದರು.

ಇಂಡಿ ತಾಲೂಕಿನ ಪರಿಸ್ಥಿತಿ ಕುರಿತು ಮುಖ್ಯಮಂತ್ರಿಗಳು ಮತ್ತು ಕಂದಾಯ ಮಂತ್ರಿಗಳಿಗೆ ಮನವರಿಕೆ ಮಾಡಿ ಕೊಟ್ಟಿದ್ದು ಇಂಡಿ, ಚಡಚಣ ಮತ್ತು ತಾಳಿಕೋಟಿ ಬರ ತಾಲೂಕು ಘೋಷಿಸುವ ಸಾಧ್ಯತೆ ಇದೆ ಎಂದರು.

ಕೃಷ್ಣಾ ಕಾಲುವೆಯ ನೀರಿನ ಮೂಲಕ ತಾಲೂಕಿನಲ್ಲಿರುವ ಕೆರೆಗಳನ್ನು ತುಂಬಲಾಗುತ್ತಿದ್ದು ತಾಲೂಕಿನ ಗ್ರಾಮಗಳಿಗೆ ಕುಡಿಯುವ ನೀರಿನ ತೊಂದರೆ ಆಗದು, ಆದರೆ ಭೀಮಾ ನದಿಯಿಂದ ನೀರು ಬಿಡುವ ಕುರಿತು ಮಹಾರಾಷ್ಟ್ರ ಸರಕಾರ ಮತ್ತು ಜಿಲ್ಲಾಧಿಕಾರಿಗಳಿಗೆ ಮನವರಿಕೆ ಮಾಡಲಾಗಿದ್ದು ಅವರು ನೀರು ಬಿಟ್ಟರೆ ಭೀಮಾ ದಂಡೆಯ ಗ್ರಾಮಗಳಿಗೂ ನೀರಿನ ತೊಂದರೆ ಯಾಗದು ಎಂದರು.

ನಗರಕ್ಕೆ ಜಲಧಾರೆ ಯೋಜನೆ ಆದರೆ ಶಾಶ್ವತ ಕುಡಿಯುವ ನೀರಿನ ಪರಿಹಾರ ಆಗುತ್ತದೆ. ಜೆಜೆಎಂ ಕಾರ್ಯ ತೀವ್ರ ಆದಲ್ಲಿ ನಗರಕ್ಕೆ ನೀರಿನ ತೊಂದರೆ ಆಗದು, ಆದರೂ ಲೋಣಿ ಕೆರೆಯಿಂದ ಇಂಡಿ ನಗರಕ್ಕೆ ನೀರು ತರುವ ಶಾಶ್ವತ ಪ್ರಯತ್ನ ಮಾಡಲಾಗುತ್ತಿದೆ ಎಂದರು.

ಜಿಲ್ಲಾಧಿಕಾರಿ ಕೆ.ಆನಂದ ಮಾತನಾಡಿ ತಾಲೂಕಿನಲ್ಲಿ ಮಳೆಯ ಮುನ್ಸುಚನೆ ಇಲ್ಲ, ಸೆ.30 ರ ವರೆಗೆ ಮಳೆಯ ಅವಕಾಶವಿದೆ. ಆದರೂ ಕೃಷ್ಣಾ ಕಾಲುವೆಯಿಂದ ಎಲ್ಲ ಕೆರೆಗಳನ್ನು ತುಂಬಲಾಗುತ್ತಿದ್ದು ಡಿ. 30 ರ ವರೆಗೆ ಕುಡಿಯುವ ನೀರಿನ ತೊಂದರೆ ಆಗುವದಿಲ್ಲ ಎಂದರು.ಮೇವಿನ ಕೊರತೆ ಇಲ್ಲ ಆದರೂ ಮುಂಜಾಗೃತೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಉಷ್ಣಾಂಶ ಜಾಸ್ತಿ ಇದ್ದು ರೈತರ ಮೇವಿನ ಬೇಡಿಕೆ ಕುರಿತು ಆಗುತ್ತದೆ. ಅದಕ್ಕಾಗಿ ಎಲ್ಲ ಮುಂಜಾಗೃತೆ ಕ್ರಮ ಕೈಕೊಳ್ಳಲಾಗುತ್ತಿದೆ ಎಂದರು.

ಜಿ.ಪಂ ಮುಖ್ಯ ಕಾರ್ಯದರ್ಶಿ ರಿಷಿ ಆನಂದ ಮಾತನಾಡಿ, ಈಗಾಗಲೇ ಮೂರು ಹಂತಗಳಲ್ಲಿ ಮೊದಲ ಹಂತದಲ್ಲಿ 30 ಲಕ್ಷದಲ್ಲಿ, ಎರಡನೆಯ ಹಂತದಲ್ಲಿ 8.75 ಲಕ್ಷ ರೂ ಮೂರನೇಯ ಹಂತದಲ್ಲಿ ಒಂದು ಕೋಟಿ ರೂ ಅನುದಾನ ನೀಡಿದ್ದು ಗ್ರಾ.ಪಂ ಬಯಸಿದರೆ ಅನುದಾನ ನೀಡುವದಾಗಿ ತಿಳಿಸಿದರು.

ಕೃಷಿ ಸಹಾಯಕ ನಿರ್ದೇಶಕ ಮಹಾದೇವಪ್ಪ ಏವೂರಮಾತನಾಡಿ ಇಲ್ಲಿಯ ವರೆಗೆ 412 ಮೀ ಮೀ ಮಳೆ ಆಗಬೇಕಾಗಿತ್ತು, 279 ಮೀ ಮೀ ಮಳೆ ಆಗಿ 32 ಮೀ ಮೀ ಮಳೆ ಕೊರತೆ ಇದೆ, ಮುಂಗಾರು ಬೆಳೆ ಅದರಲ್ಲೂ ಕಬ್ಬು ಎಲ್ಲೂ ಸರಿಯಾಗಿ ಬೆಳೆದಿಲ್ಲ, 42 ಸಾವಿರ ರೈತರು ಬೆಳೆ ವಿಮೆ ಮಾಡಿದ್ದು ಮಳೆ ಯಿಲ್ಲದೆ ಹಿಂಗಾರು ಬೆಳೆಗೂ ಕೊರತೆ ಅನುಭವಿಸಬೇಕಾದ ಪರಿಸ್ಥಿತಿ ಬಂದಿದೆ ಎಂದರು.

ಹೆಸ್ಕಾ ಎಸ್.ಎ, ಬಿರಾದಾರ ಮತ್ತು ಎಸ್.ಆರ್ ಮೆಂಡೆಗಾರ ಮಾತನಾಡಿ ಮಳೆಯ ಕೊರತೆ ಕಾರಣ ತಾಲೂಕಿನಲ್ಲಿ 20 ಸಾವಿರ ಮೆಗಾವ್ಯಾಟ್ ಸಪ್ಟೆಂಬರ ನಲ್ಲಿ ವಿದ್ಯುತ್ ಬಳಕೆಯಾಗಿದೆ. ಈ ಹಿಂದೆ ಇಷ್ಟು ಪ್ರಮಾಣದಲ್ಲಿ ಎಂದೂ ಬಳಕೆ ಆಗಿರಲಿಲ್ಲ ಎಂದರು.

ವೇದಿಕೆಯ ಮೇಲೆ ಕಂದಾಯ ಉಪ ವಿಬಾಗಾಧಿಕಾರಿ ಚಿದಾನಂದ ಗುರುಸ್ವಾಮಿ, ತಹಸೀಲ್ದಾರ ನಾಗೇಂದ್ರ ಕೋಳಶೆಟ್ಟಿ, ಡಿ.ವಾಯ್ ಎಸ್ ಪಿ ಸದಾಶಿವ ಕಟ್ಟಿಮನಿ ಮತ್ತಿತರರಿದ್ದರು.

ಸಭೆಯಲ್ಲಿ ಎಲ್ಲ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಭಕ್ತಿಯ ಪುರ & ಹೃದಯವಂತರ ಬೀಡಾಗಿರುವ ಬಬಲೇಶ್ವರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಶಾಂತವೀರ ಶ್ರೀಗಳು 20 ವರ್ಷ ಅಂಧರಾಗಿದ್ದರೂ ಸದ್ಭಕ್ತರ ಅಂತರಂಗದ ಬೆಳಕಾಗಿದ್ದರು. ಇಲ್ಲಿಯ ಭಕ್ತರಲ್ಲಿ ಆಧ್ಯಾತ್ಮಿಕ ತೆಯ ಹೊಳಹನ್ನು ಮೂಡಿಸಿದ ಇಂತಹ ಸತ್ಪುರುಷರ ಆಶೀರ್ವಾದದ ಬಲದ ಈ ಬಬಲೇಶ್ವರ ಭಕ್ತಿಯ ಪುರವಾಗಿದೆ, ಹೃದಯವಂತರ ಬೀಡಾಗಿದೆ ಎಂದು ಕರ್ನಾಟಕ ಬಾಲವಿಕಾಸ ಅಕಾಡೆಮಿ ನಿಕಟಪೂರ್ವ ಅಧ್ಯಕ್ಷ ಸಂಗಮೇಶ್ವರ ಬಬಲೇಶ್ವರ ಅಭಿಪ್ರಾಯಪಟ್ಟರು.

ಜಿಲ್ಲೆಯ ಬಬಲೇಶ್ವರದ ಶ್ರೀ ಗುರು ಗುರುಪಾದೇಶ್ವರ ಸಂಸ್ಥಾನ ಮಠದಲ್ಲಿ ಹಮ್ಮಿಕೊಂಡ ಶ್ರೀಗಳ ವಜ್ರಮಹೋತ್ಸವ ಹಾಗೂ ಗುರು ಪಟ್ಟಾಧಿಕಾರ ಮಹೋತ್ಸವದ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.ಭಕ್ತಿಭಂಡಾರಿ ಬಸವಣ್ಣನವರ ನಂತರ ಈ ರಾಜ್ಯದಲ್ಲಿ ಎಲ್ಲಾದರೂ ಎಲ್ಲ ಭಕ್ತಿಯ ಮಾರ್ಗಗಳು ಸೇರಿದ್ದರೆ, ಅದು ಬದುಕಿನ ಸಾರ್ಥಕ್ಯ ತಂದುಕೊಡುತ್ತಿದ್ದರೆ ಅದು ಬಬಲೇಶ್ವರದ ಗುರು ಪಾದೇಶ್ವರ ಕತೃಗದ್ದುಗೆ ಎಂದು ಬಣ್ಣಿಸಿದರು. ಕಾರ್ಯಕ್ರಮದಲ್ಲಿ ನಾಡಿನ ಹಲವು ಹರಗುರು ಚರ ಮೂರ್ತಿಗಳು ಪಾಲ್ಗೊಂಡಿದ್ದರು.

**ಕರ್ನಾಟಕ ಬಾಲವಿಕಾಸ ಅಕಾಡೆಮಿ ನಿಕಟಪೂರ್ವ ಅಧ್ಯಕ್ಷ ಸಂಗಮೇಶ್ವರ ಬಬಲೇಶ್ವರ ಅಭಿಮತ**

**ಸರ್ಕಾರದಿಂದ ಬರಪೀಡಿತ ಎಂದು ಘೋಷಣೆ । ಒಟ್ಟು ಸಂಖ್ಯೆ 124ಕ್ಕೆ ಏರಿಕೆ ।**

# ಇನ್ನೂ 23 ತಾಲೂಕುಗಳು ಬರಪೀಡಿತ ಪಟ್ಟಿಗೆ ಸೇರ್ಪಡೆ



ಬೆಂಗಳೂರು: ರಾಜ್ಯದ ಹಲವು ಭಾಗಗಳಲ್ಲಿನ ಒಣ ಹವಾಮಾನದ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರ ಗುರುವಾರ ಮತ್ತೆ 23 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ. ಇದರೊಂದಿಗೆ, ಇಲ್ಲಿಯವರೆಗೆ ಬರಪೀಡಿತ ಎಂದು ಘೋಷಿಸಲಾದ ಒಟ್ಟು ತಾಲೂಕುಗಳ ಸಂಖ್ಯೆ 124ಕ್ಕೆ ಏರಿಕೆಯಾಗಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರವು (KSNDMC) ನಡೆಸಿದ ಸಮಗ್ರ ಮೌಲ್ಯಮಾಪನ ಮತ್ತು ಸ್ಥಳ ಪರಿಶೀಲನೆ (ground-truthing) ಆಧಾರದ ಮೇಲೆ, ಕಂದಾಯ ಇಲಾಖೆಯು (ವಿಪತ್ತು ನಿರ್ವಹಣೆ) ಈ ಹೆಚ್ಚುವರಿ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿ ಗುರುವಾರ ಆದೇಶ ಹೊರಡಿಸಿದೆ.

ಮೊದಲ ಹಂತದಲ್ಲಿ, ಆಗಸ್ಟ್ 27 ರಂದು ಸರ್ಕಾರ ಖಾರಿಫ್ ಹಂಗಾಮಿನ ಹಿನ್ನೆಲೆಯಲ್ಲಿ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿತ್ತು. ನಂತರ, ರಾಜ್ಯದ ಹಲವು ಭಾಗಗಳಲ್ಲಿ ಮಳೆಯಿಲ್ಲದ ಪರಿಸ್ಥಿತಿ ಮುಂದುವರಿದ ಹಿನ್ನೆಲೆಯಲ್ಲಿ, KSNDMC ಉಳಿದ 139 ತಾಲೂಕುಗಳ ವೈಜ್ಞಾನಿಕ ಮೌಲ್ಯಮಾಪನವನ್ನು ನಡೆಸಿತು.

ಉಪ ಮುಖ್ಯಮಂತ್ರಿ ಜಿ. ಪರಮೇಶ್ವರ್ ಅವರ ನೇತೃತ್ವದ ನೈಸರ್ಗಿಕ ವಿಕೋಪಗಳ ಕುರಿತ ಸಚಿವ ಸಂಪುಟ ಉಪ-ಸಮಿತಿಯ ನಿರ್ದೇಶನದ ಮೇರೆಗೆ, 24 ತಾಲೂಕುಗಳ ವ್ಯಾಪ್ತಿಯ 214 ಹಳ್ಳಿಗಳಲ್ಲಿ ಮೊಬೈಲ್ ಅಪ್ಲಿಕೇಶನ್ ಮೂಲಕ ಸ್ಥಳ ಪರಿಶೀಲನೆ ನಡೆಸಲಾಯಿತು.

ಸ್ಥಳ ಪರಿಶೀಲನಾ ಪ್ರಕ್ರಿಯೆ ಮತ್ತು ಏಖಓಆ-ಒಆ ಸಲ್ಲಿಸಿದ ಸಮಗ್ರ ವರದಿಯ ಆಧಾರದ ಮೇಲೆ ಈಗ ಹೆಚ್ಚುವರಿಯಾಗಿ 23 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಇವುಗಳಲ್ಲಿ 21 ತಾಲೂಕುಗಳನ್ನು ತೀವ್ರ ಬರಪೀಡಿತ ಮತ್ತು ಎರಡು ತಾಲೂಕುಗಳನ್ನು ಮಧ್ಯಮ ಬರಪೀಡಿತ ಎಂದು ವರ್ಗೀಕರಿಸಲಾಗಿದೆ. ಈ ಘೋಷಣೆಯು ತಕ್ಷಣದಿಂದಲೇ ಜಾರಿಗೆ ಬಂದಿದ್ದು, 6 ತಿಂಗಳವರೆಗೆ ಜಾರಿಯಲ್ಲಿರುತ್ತದೆ.

ಬೆಳೆ ನಷ್ಟದ ಸಮೀಕ್ಷೆಯನ್ನು ಜಂಟಿಯಾಗಿ ನಡೆಸುವಂತೆ ಹಾಗೂ ಪರಿಹಾರದ ಅಂದಾಜು ವರದಿಗಳನ್ನು ಆದಷ್ಟು ಶೀಘ್ರವಾಗಿ ಸರ್ಕಾರಕ್ಕೆ ಸಲ್ಲಿಸುವಂತೆ ಕೃಷಿ ಆಯುಕ್ತರು, ತೋಟಗಾರಿಕೆ ನಿರ್ದೇಶಕರು ಮತ್ತು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.

ಸೆಪ್ಟೆಂಬರ್ ತಿಂಗಳಲ್ಲೂ ವಾಡಿಕೆಗಿಂತ ಕಡಿಮೆ ಮಳೆಯಾಗುವ ಮುನ್ಸೂಚನೆ ಇರುವುದರಿಂದ, ಕೆ-ಎಸ್‌ಎನ್‌ಡಿಎಂಸಿ (KSNDMC) ಪ್ರತಿ ವಾರ ಬರ ಪರಿಸ್ಥಿತಿಯನ್ನು ಪರಿಶೀಲಿಸಲಿದೆ ಎಂದು ಸರ್ಕಾರ ತಿಳಿಸಿದೆ.

ಅರ್ಹತೆಯ ಆಧಾರದ ಮೇಲೆ ಹೆಚ್ಚುವರಿ ತಾಲೂಕುಗಳನ್ನು ಹಂತ ಹಂತವಾಗಿ ಬರಪೀಡಿತ ತಾಲೂಕುಗಳೆಂದು ಘೋಷಿಸಲಾಗುವುದು ಎಂದೂ ಸರ್ಕಾರ ಹೇಳಿದೆ.

**ಬರಪೀಡಿತವೆಂದು ಘೋಷಿಸಲಾದ 21 ತಾಲೂಕುಗಳು**

ತೀವ್ರಬರಪೀಡಿತವೆಂದುಘೋಷಿಸಲಾದ21ತಾಲೂಕುಗಳೆಂದರೆ:ತುಮಕೂರುಜಿಲ್ಲೆಯತಿಪಟೂರು;ಕೊಪ್ಪಳದಕಾರಟಗಿ; ರಾಯಚೂರಿನ ಮಾನವಿ, ಸಿಂಧನೂರು ಮತ್ತು ಸಿರ್ವಾರ; ಕಲಬುರಗಿಯ ಅಫಜಲಪುರ, ಆಳಂದ, ಚಿತ್ತಾಪುರ, ಕಲಬುರಗಿ, ಯಡ್ರಾಮಿ ಮತ್ತು ಶಹಾಬಾದ್; ಬೀದರ್‌ನ ಭಾಲ್ಕಿ; ವಿಜಯಪುರದ ಬಸವನ ಬಾಗೇವಾಡಿ, ಬಬಲೇಶ್ವರ ಮತ್ತು ತಿಕೋಟಾ; ಹಾವೇರಿಯರಟ್ಟಿಹಳ್ಳಿ;ಧಾರವಾಡದಹುಬ್ಬಳ್ಳಿ,ನವಲಗುಂದ,ಹುಬ್ಬಳ್ಳಿನಗರಮತ್ತುಅಣ್ಣಿಗೇರಿ;ಹಾಗೂಚಿಕ್ಕಮಗಳೂರಿನಕಡೂರು.

ಮಧ್ಯಮಬರಪೀಡಿತವೆಂದುಕೊಡಗುಜಿಲ್ಲೆಯಪೊನ್ನಂಪೇಟೆಮತ್ತುವಿರಾಜಪೇಟೆತಾಲೂಕುಗಳನ್ನುಘೋಷಿಸಲಾಗಿದೆ. ರಾಜ್ಯವಿಪತ್ತುಪರಿಹಾರನಿಧಿಯ ಮಾರ್ಗಸೂಚಿಗಳನ್ವಯ ಅಗತ್ಯಪರಿಹಾರ ಮತ್ತು ತುರ್ತು ಸ್ಪಂದನಾ ಕ್ರಮಗಳನ್ನು ಕೈಗೊಳ್ಳಲು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಗಳ ಮುಖ್ಯಸ್ಥರಾಗಿರುವ ಆಯಾ ಜಿಲ್ಲಾಧಿಕಾರಿಗಳಿಗೆ ಸರ್ಕಾರ ಅಧಿಕಾರ ನೀಡಿದೆ.

**ಬಿಜೆಪಿ ರಾಜ್ಯ ಉಪಾಧ್ಯಕ್ಷ ಹಾಗೂ ಮಾಜಿ ಸಚಿವ ಮುರುಗೇಶ್ ನಿರಾಣಿ**

# ಉದ್ಯಮಗಳಿಗೆ ಬೆಂಬಲ ನೀಡಿದಾಗ ಮಾತ್ರ ರಾಜ್ಯದ ಅಭಿವೃದ್ಧಿ ಸಾಧ್ಯ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಉದ್ಯಮ ರಂಗದಲ್ಲಿ ಸರ್ಕಾರಗಳು ರಾಜಕೀಯ ದ್ವೇಷ ಸಾಧಿಸುವುದು ಸರಿಯಲ್ಲ. ಉದ್ಯಮಗಳಿಗೆ ಬೆಂಬಲ ನೀಡಿದಾಗ ಮಾತ್ರ ರಾಜ್ಯದ ಅಭಿವೃದ್ಧಿ ಸಾಧ್ಯ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಹಾಗೂ ಮಾಜಿ ಸಚಿವ ಮುರುಗೇಶ್ ನಿರಾಣಿ ಹೇಳಿದರು.

ನಗರದ ವಿಶಾಲ ಸೌಹಾರ್ದ ಪತ್ತಿನ ಸಹಕಾರ ಸಂಘದ ಕಾರ್ಯಾಲಯದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಎಂ.ಆರ್.ಎನ್ ಗ್ರುಫ್ ವತಿಯಿಂದ ನಮ್ಮ ರಾಜ್ಯದಲ್ಲಿ ಬಯೋಪ್ಲಾಸ್ಟಿಕ್ ಕಾರ್ಖಾನೆ ಸ್ಥಾಪಿಸಲು ಯೋಜನೆ ರೂಪಿಸಲಾಗಿತ್ತು ಆದರೆ "ನಮಗೆ ಕರ್ನಾಟಕದಲ್ಲಿ ಬಯೋ ಪ್ಲಾಸ್ಟಿಕ್ ಕಾರ್ಖಾನೆ ನಿರ್ಮಿಸಲು ಸರ್ಕಾರ ಅನುಮತಿ ನೀಡಲಿಲ್ಲ. ಆದರೆ ಮಹಾರಾಷ್ಟ್ರ ಮತ್ತು ಆಂಧ್ರಪ್ರದೇಶ ರಾಜ್ಯಗಳು ತಾವಾಗಿಯೇ ಮುಂದೆ ಬಂದು ನಮಗೆ ಆಹ್ವಾನ ನೀಡಿ, ಅನುಮತಿ ನೀಡಿವೆ. ಅಲ್ಲಿ ಸುಮಾರು 6,000 ಕೋಟಿ ರೂಪಾಯಿ ವೆಚ್ಚದಲ್ಲಿ ಬಯೋ ಪ್ಲಾಸ್ಟಿಕ್ ಕಾರ್ಖಾನೆಗಳು ಸಿದ್ಧಗೊಳ್ಳುತ್ತಿವೆ. ನಮ್ಮ ರಾಜ್ಯದ ಉದ್ಯಮಿಗಳಿಗೆ ಇಲ್ಲಿಯೇ ಅವಕಾಶ ನೀಡುವ ಬದಲು, ಬೇರೆ ದೇಶ ಅಥವಾ ಬೇರೆ ರಾಜ್ಯದವರಿಗೆ ಅನುಕೂಲ ಮಾಡಿಕೊಡುವುದನ್ನು ಬಿಟ್ಟು ಕನ್ನಡಿಗರಿಗೇ ಮೊದಲ ಆದ್ಯತೆ ಮತ್ತು ಅನುಕೂಲ ಕಲ್ಪಿಸಬೇಕು" ಎಂದು ಅವರು ಸರ್ಕಾರವನ್ನು ಒತ್ತಾಯಿಸಿದರು. ಕಬ್ಬು ಬೆಳೆಗಾರರು ಹಾಗೂ ಸಕ್ಕರೆ ಕಾರ್ಖಾನೆಗಳ ಲಾಭಕ್ಕಾಗಿ ಹೊಸ ದರ ನೀತಿಯನ್ನು ಪ್ರಸ್ತಾಪಿಸಿದ ನಿರಾಣಿ, "ಸಾಮಾನ್ಯ ಜನರಿಗೆ ಒಂದು ದರ ಮತ್ತು ದೊಡ್ಡ ಕಂಪನಿಗಳಿಗೆ ಮತ್ತೊಂದು ದರ ನಿಗದಿಪಡಿಸಬೇಕು. ಸಾಮಾನ್ಯರಿಗೆ ಪ್ರತಿ ಕೆಜಿಗೆ ರೂ. 40 ಹಾಗೂ ಶ್ರೀಮಂತ ಕಾರ್ಖಾನೆ/ಕಂಪನಿಗಳಿಗೆ ರೂ. 60 ರಂತೆ ಸಕ್ಕರೆ ಖರೀದಿಗೆ ಸರ್ಕಾರ ಆದೇಶ ಹೊರಡಿಸಿದರೆ, ಕಬ್ಬು ಬೆಳೆಗಾರರಿಗೂ ಮತ್ತು ಸಕ್ಕರೆ ಉದ್ಯಮಕ್ಕೂ ಹೆಚ್ಚಿನ ಲಾಭ ತರಲು ಸಾಧ್ಯವಾಗುತ್ತದೆ" ಎಂದರು.


ತಮ್ಮ ಉದ್ಯಮದ ಯಶೋಗಾಥೆಯನ್ನು ಹಂಚಿಕೊಂಡ ಅವರು, "ಕೇವಲ 10 ಲಕ್ಷ ರೂಪಾಯಿ ಹೂಡಿಕೆಯೊಂದಿಗೆ ಪ್ರಾರಂಭವಾದ ಸಕ್ಕರೆ ಕಾರ್ಖಾನೆ, ಇಂದು 25,000 ಕೋಟಿ ರೂಪಾಯಿ ಬಂಡವಾಳದ ಬೃಹತ್ ಉದ್ಯಮವಾಗಿ ಬೆಳೆದಿದೆ. ಪ್ರಸ್ತುತ ನಮ್ಮ ಸಂಸ್ಥೆಯಲ್ಲಿ 72,000 ಕ್ಕೂ ಹೆಚ್ಚು ಜನ ಉದ್ಯೋಗ ಮಾಡುತ್ತಿದ್ದಾರೆ. ಮುಂದಿನ ಎರಡು ವರ್ಷಗಳಲ್ಲಿ ನಿರಾಣಿ ಗ್ರೂಪ್ ಒಟ್ಟು ಒಂದು ಲಕ್ಷ ಜನರಿಗೆ ಉದ್ಯೋಗ ನೀಡುವ ಗುರಿ ಹೊಂದಲಾಗಿದೆ" ಎಂದು ತಿಳಿಸಿದರು.

ಇದೇ ವೇಳೆ ಯುವ ಪದವೀಧರರಿಗೆ ಕಿವಿಮಾತು ಹೇಳಿದ ಮುರುಗೇಶ್ ನಿರಾಣಿ, ಯುವಕರು ಕೈಗಾರಿಕೆಗಳ ಬಗ್ಗೆ ಜ್ಞಾನ ಬೆಳೆಸಿಕೊಳ್ಳಬೇಕು, ಪುಸ್ತಕಗಳನ್ನು ಓದಬೇಕು. ಸರ್ಕಾರದ ಸಹಾಯಧನ ಮತ್ತು ಸಾಲ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಸ್ವಂತ ಉದ್ಯಮ ನಿರ್ಮಿಸಲು ಮುಂದಾಗಬೇಕು ಎಂದು ಸಲಹೆ ನೀಡಿದರು.

**ಚಡಚಣ ಏತ ನೀರಾವರಿ ಯೋಜನೆ ದುರುಪಯೋಗ ಆರೋಪ । ಅಕ್ರಮ ಪಂಪ್‌ಸೆಟ್ ತೆರವುಗೊಳಿಸಲು ಒತ್ತಾಯ**

# ಶಿರಾಡೋಣ ಹಾಲಹಳ್ಳಿ ರೈತರಿಗೆ ನೀರು ಒದಗಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಕರ್ನಾಟಕ ಮಹಾರಾಷ್ಟ್ರ ಗಡಿಭಾಗದ ಕಟ್ಟಕಡೆಯ ಗ್ರಾಮಗಳಾದ ಶಿರಾಡೋಣ ಹಾಗೂ ಹಾಲಹಳ್ಳಿ ಗ್ರಾಮದ ರೈತರಿಗೆ ಚಡಚಣ ಏತ ನೀರಾವರಿ ಯೋಜನೆಯ ನೀರು ಸಮರ್ಪಕವಾಗಿ ದೊರೆಯುತ್ತಿಲ್ಲ. ಯೋಜನೆಯ ಪೈಪ್‌ಲೈನ್ ಒಡೆದು ಅಕ್ರಮವಾಗಿ ಪಂಪ್‌ಸೆಟ್‌ಗಳನ್ನು ಅಳವಡಿಸಿಕೊಂಡು ನೀರು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿ ಗ್ರಾಮಗಳ ರೈತರು ಬುಧವಾರ ಚಡಚಣ ತಹಶೀಲ್ದಾರರಿಗೆ ಮನವಿ ಸಲ್ಲಿಸಿದರು.

ಮನವಿ ಸ್ವಿಕರಿಸಿ ಮಾತನಾಡಿದ ಚಡಚಣ ಉಪ ತಹಶೀಲ್ದಾರ ಕೆ ವಾಯ್ ಹೊಸಮನಿ ಶಿರಾಡೋನ ಹಾಗೂ ಹಾಲಹಳ್ಳಿ ರೈತರಿಗೆ ಆಗುತ್ತಿರುವ ಅನ್ಯಾಯದ ಬಗ್ಗೆ ಕೂಡಲೆ ಮೇಲಾಧಿಕಾರಿಗಳಿಗೆ ತಿಳಿಸಿ ಕ್ರಮ ಕೈಗೊಳ್ಳುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ರೈತ ಎಚ್.ಎಸ್. ಬನಸೋಡೆ, ಚಡಚಣ ಏತ ನೀರಾವರಿ ಯೋಜನೆಯ ನೀರನ್ನು ಅಕ್ರಮವಾಗಿ ಬಳಸುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಅನಧಿಕೃತವಾಗಿ ಅಳವಡಿಸಿರುವ ಪಂಪ್‌ಸೆಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು, ಯೋಜನೆಯ ನೀರು ಅರ್ಹ ರೈತರ ಜಮೀನುಗಳಿಗೆ ತಲುಪುವಂತೆ ಕ್ರಮ ವಹಿಸಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ಮಹಾರಾಷ್ಟ್ರ ಗಡಿಭಾಗವಾಗಿರುವುದರಿಂದ ಮಹಾರಾಷ್ಟ್ರದ ಕೆಲ ರೈತರು ನೀರಾವರಿ ಯೋಜನೆಯ ಪೈಪ್‌ಲೈನ್ ಒಡೆದು ಅಕ್ರಮವಾಗಿ ಪಂಪ್‌ಸೆಟ್ ಅಳವಡಿಸಿಕೊಂಡು ತಮ್ಮ ಜಮೀನುಗಳಿಗೆ ನೀರು ಹರಿಸಿಕೊಳ್ಳುತ್ತಿದ್ದಾರೆ. ಇದರಿಂದ ಶಿರಾಡೋಣ ಹಾಗೂ ಹಾಲಹಳ್ಳಿ ಗ್ರಾಮದ ರೈತರಿಗೆ ನೀರು ತಲುಪುತ್ತಿಲ್ಲ ಎಂದು ಅವರು ದೂರಿದರು.

ರೈತರು ಈಗಾಗಲೇ ಜಿಲ್ಲಾಧಿಕಾರಿಗಳು, ಶಾಸಕರು ಹಾಗೂ ಸಚಿವರ ಗಮನಕ್ಕೆ ಸಮಸ್ಯೆಯನ್ನು ತಂದಿದ್ದರೂ, ಸಮಸ್ಯೆ ಬಗೆಹರಿದಿಲ್ಲ. ನೀರಿಲ್ಲದೆ ರೈತರ ಪರಿಸ್ಥಿತಿ ದಿನದಿಂದ ದಿನಕ್ಕೆ ಸಂಕಷ್ಟಕ್ಕೆ ಸಿಲುಕುತ್ತಿದೆ. ಈ ಹಿನ್ನೆಲೆಯಲ್ಲಿ ಶಿರಾಡೋಣ ಗ್ರಾಮದ ರೈತರು ಸ್ವತಃ ಚಡಚಣದಿಂದ ಶಿರಾಡೋಣ ಗ್ರಾಮದ ಗಡಿಭಾಗದವರೆಗೆ ನೀರಾವರಿ ಯೋಜನೆಯ ಪೈಪ್‌ಲೈನ್ ಪರಿಶೀಲನೆ ನಡೆಸಿ, ಅಕ್ರಮ ಬಳಕೆಯ ಕುರಿತು ಜಿಪಿಎಸ್ ದಾಖಲೆ, ಛಾಯಾಚಿತ್ರ ಹಾಗೂ ವಿಡಿಯೊಗಳನ್ನು ಸಂಗ್ರಹಿಸಿರುವುದಾಗಿ ತಿಳಿಸಿದರು.

ಇದರೊಂದಿಗೆ ಕೃಷ್ಣಾ ಭಾಗ್ಯ ಜಲನಿಗಮ ನಿಯಮಿತದ ರಾಮಪುರ ವಿಭಾಗದ ವ್ಯಾಪ್ತಿಗೆ ಬರುವ ಚಡಚಣ ಏತ ನೀರಾವರಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ, ನೀರು ಪೂರೈಕೆಗೆ ವೇಳಾಪಟ್ಟಿ ನಿಗದಿಪಡಿಸಬೇಕು ಎಂದು ರೈತರು ಒತ್ತಾಯಿಸಿದರು.

ಅಧಿಕಾರಿಗಳು ಮನವಿಗೆ ಸ್ಪಂದಿಸಿ ಸಮಸ್ಯೆ ಬಗೆಹರಿಸದಿದ್ದರೆ ಶಿರಾಡೋಣ ಹಾಗೂ ಹಾಲಹಳ್ಳಿ ಗ್ರಾಮದ ರೈತರು ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ವಿಶ್ವನಾಥ ಬಿರಾದಾರ, ರವಿಕಾಂತ ಪೂಜಾರಿ, ಸಂತೋಷ ಖರಾತ, ಪೀರಪ್ಪ ಖರಾತ, ನೆನೆಪ್ಪ ಬಿರಾದಾರ, ಶ್ರೀಶೈಲ ಖರಾತ, ಶಿವರಾಜ, ಸಂತೋಷ ಪೂಜಾರಿ ಸೇರಿದಂತೆ ಶಿರಾಡೋಣ ಹಾಗೂ ಹಾಲಹಳ್ಳಿ ಗ್ರಾಮದ ರೈತರು ಉಪಸ್ಥಿತರಿದ್ದರು.

"ಚಡಚಣ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ರೈತರ ಸಮಸ್ಯೆ ಕುರಿತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಮಾತನಾಡಿ, ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸೂಚಿಸುವೆ."

■ ರಮೇಶ ಜಿಗಜಿಣಗಿ
ಸಂಸದರು



## ಶಾಲೆಯಲ್ಲಿ ವಿಶ್ವ ಓಝೋನ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ತಾಲೂಕಿನ ಕುಪಕಡ್ಡಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶ್ವ ಓಝೋನ ದಿನವನ್ನು ವಿಶೇಷವಾಗಿ ಆಚರಿಸಲಾಯಿತು. ಓಝೋನ (OZONE) ಅಕ್ಷರಗಳ ರೂಪದಲ್ಲಿ ಮಕ್ಕಳು ಕುಳಿತುಕೊಂಡು ಓಝೋನ ದಿನವನ್ನು ಆಚರಿಸಿದರು. ಜಿ.ಪಿ.ಟಿ ಶಿಕ್ಷಕರಾದ ಸಂಗಮೇಶ ಎಲಿಬಳ್ಳಿ ಯವರು ಮಾತನಾಡಿ, ಮೊಬೈಲ್ ಅನ್ನುಂಟಿವೈರಸ್ ಸಾಪ್ಟವೇರ್ ಹೇಗೆ ರಕ್ಷಣೆ ಮಾಡುತ್ತದೆ ಅದೇ ರೀತಿಯಲ್ಲಿ ಭೂಮಂಡಲವನ್ನು ಸೂರ್ಯನ ನೇರಳಾತೀತ ಕಿರಣಗಳಿಂದ ರಕ್ಷಣೆ ಮಾಡುತ್ತದೆ. ನಾವೆಲ್ಲರೂ ಅದೇ ಓಝೋನ ಪದರದ ಅಡಿಯಲ್ಲಿ ಸುರಕ್ಷಿತವಾಗಿ ಇದ್ದೇವೆ. ಓಝೋನ ರಕ್ಷಣೆ ಕೆಲಸ ನಮ್ಮೆಲ್ಲರ ಆದ್ಯ ಕರ್ತವ್ಯ. ಹಸಿರು ಪರಿಸರ ನಿರ್ಮಾಣ ಹಾಗೂ ವಾಹನಗಳ ಮಿತವಾದ ಬಳಕೆ, ವಾಯುಮಾಲಿನ್ಯ ಕಡಿಮೆಮಾಡಿ ಓಝೋನ ರಕ್ಷಣೆ ಮಾಡೋಣ. ನಮ್ಮ ಭವಿಷ್ಯ ಓಝೋನ ಪದರದ ಮೇಲಿದ್ದು ಅದನ್ನು ಮಗುವಿನಂತೆ ರಕ್ಷಣೆ ಮಾಡುವುದು ನಮ್ಮ ಕರ್ತವ್ಯ ಎಂದರು. ಈ ಸಂದರ್ಭದಲ್ಲಿ ಶಾಲೆಯ ಸಿಬ್ಬಂದಿಗಳಾದ ಗಂಗೂಬಾಯಿ ಕರಣೆ, ಹೇಮಾವತಿ, ಹಣಮಂತ ಬಿರಾದಾರ, ಸಿದ್ದಪ್ಪ ಕೋಟ್ಯಾಳ, ಶಾಂತಪ್ಪ ನಾಗರಳ್ಳಿ, ಕವಿತಾ ಹಿರೇಮಠ, ಲಕ್ಷ್ಮೀ ವನೇಶಿ, ನಂದಾ ಹಲಗಲಿ ಹಾಜರಿದ್ದರು.

## ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026–27ನೇ ಸಾಲಿನ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆ.24 ಮತ್ತು 25ರಂದು ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಪುರುಷ ಹಾಗೂ ಮಹಿಳೆಯರಿಗಾಗಿ ಆಯೋಜಿಸಲಾಗಿದೆ. ಕ್ರೀಡಾಕೂಟದಲ್ಲಿ ಅಥ್ಲೆಟಿಕ್ಸ್, ವಾಲಿಬಾಲ್, ಫುಟ್ಬಾಲ್, ಕಬಡ್ಡಿ, ಖೋ–ಖೋ, ಕುಸ್ತಿ, ಬ್ಯಾಡ್ಮಿಂಟನ್, ಹಾಕಿ, ಹ್ಯಾಂಡ್‌ಬಾಲ್, ಟೇಬಲ್ ಟೆನಿಸ್, ಥ್ರೋಬಾಲ್, ಬಾಲ್ ಬ್ಯಾಡ್ಮಿಂಟನ್ ಹಾಗೂ ಯೋಗಾಸನ ಸೇರಿದಂತೆ ವಿವಿಧ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ.ಪುರುಷ ಹಾಗೂ ಮಹಿಳೆಯರಿಗೆ ಟೆನ್ನಿಸ್, ನೆಟ್‌ಬಾಲ್, ಈಜು, ಟೇಕ್ವಾಂಡೋ, ಜುಡೋ, ಕರಾಟೆ ಸೇರಿದಂತೆ ವಿವಿಧ ಸ್ಪರ್ಧೆಗಳನ್ನೂ ಆಯೋಜಿಸಲಾಗಿದೆ. ತಾಲೂಕು ಮಟ್ಟದ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದ ಕ್ರೀಡಾಪಟುಗಳು ಮತ್ತು ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದ ತಂಡಗಳು ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ.ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಆಧಾರ್ ಕಾರ್ಡ್ ಹಾಗೂ ಆನ್‌ಲೈನ್ ನೋಂದಣಿ ಮಾಡಿರುವ ಪ್ರತಿಯನ್ನು ಕಡ್ಡಾಯವಾಗಿ ತರಬೇಕು. ಕರ್ನಾಟಕ ರಾಜ್ಯದಲ್ಲಿ ವಾಸಿಸುವ ಕ್ರೀಡಾಪಟುಗಳು ಮಾತ್ರ ಕ್ರೀಡಾಕೂಟದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ. ಅರ್ಹ ಕ್ರೀಡಾಪಟುಗಳು ಇಲಾಖೆಯ https://dasaracmcup.in ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 7019008443 ಹಾಗೂ 9535501872 ಮೊಬೈಲ್ ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಪ್ರಕಟಣೆ ತಿಳಿಸಿದೆ.

### ಅಥಣಿಯಲ್ಲಿ ಜೆ.ಎ ಪಪೂ ಕಾಲೇಜ್ ಪ್ರಾಚಾರ್ಯ ಮಹಾಲಿಂಗ ಮೇತ್ರಿ ಅಭಿಮತ

# ಸಾಮಾನ್ಯ ಪ್ರಜೆಗೂ ಅಧಿಕಾರ ನೀಡಿದ್ದು ಸಂವಿಧಾನ

■ ಉದಯರಶ್ಮಿ ದಿನಪತ್ರಿಕೆ

ಅಥಣಿ: ಸಂವಿಧಾನವು ಪ್ರತಿಯೊಬ್ಬ ನಾಗ–ರಿಕನಿಗೂ ಸಮಾನ ಹಕ್ಕು, ಸ್ವಾತಂತ್ರ್ಯ, ಅವಕಾಶ ಮತ್ತು ಗೌರವವನ್ನು ನೀಡಿದೆ ಸಂವಿಧಾನದಿಂದಾಗಿ ಸಾಮಾನ್ಯ ಪ್ರಜೆಗೂ ದೇಶದ ಅತ್ಯುನ್ನತ ಹುದ್ದೆಗಳನ್ನು ಅಲಂಕರಿಸಲು ಸಾಧ್ಯವಾಗಿದೆ ಎಂದು ಅಥಣಿ ಜೆ.ಎ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಮಹಾಲಿಂಗ ಮೇತ್ರಿ ಹೇಳಿದರು.

ಅವರು ಪಟ್ಟಣದ ಖೋತ ಸಭಾ ಭವನದಲ್ಲಿ ತಾಲೂಕಾ ಆಡಳಿತ, ತಾಲೂಕಾ ಪಂಚಾಯಿತಿ, ಪುರಸಭೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳ ಸಂಂ–ಯುಕ್ತಾಶ್ರಯದಲ್ಲಿ ಮಂಗಳವಾರ ಆಯೋಜಿಸಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಾಗೂ ಯುವ ಸಂಸತ್ತು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯುವಕರ ಪಾತ್ರ ಅತ್ಯಂತ ಮಹತ್ವದ್ದು. ಯುವಕರು ಸಂವಿಧಾನದ



ಆಶಯಗಳನ್ನು ಅರಿತುಕೊಂಡು ತಮ್ಮ ಹಕ್ಕು ಮತ್ತು ಕರ್ತವ್ಯಗಳನ್ನು ತಿಳಿದುಕೊಂಡು ದೇಶದ ಅಭಿವೃದ್ಧಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿದ್ಧಾರ್ಥ ಶಿಂಗೆ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನ ರಚಿಸುವ ಮೂಲಕ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಅವಕಾಶ ಕಲ್ಪಿಸಿದ್ದಾರೆ ಎಂದರು. ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ದತ್ತಾ ವಾಸ್ಟರ್ ಮಾತನಾಡಿ, ಪ್ರಜಾಪ್ರಭುತ್ವದ ನಿಜವಾದ ಶಕ್ತಿ ಜನರಲ್ಲಿದೆ. ಯುವಕರು ಕೇವಲ ತಮ್ಮ ಹಕ್ಕುಗಳ ಬಗ್ಗೆ ಮಾತನಾಡದೆ, ಕರ್ತವ್ಯಗಳನ್ನೂ ಅರಿತುಕೊಳ್ಳಬೇಕು. ಪ್ರಜಾಪ್ರಭುತ್ವ ವ್ಯವಸ್ಥೆ ಬಲಪಡಿಸುವಲ್ಲಿ ಯುವಕರ ಪಾತ್ರ ಮಹತ್ವದ್ದಾಗಿದೆ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ಶಿವಲೀಲಾ ಬುಟಾಳಿ, ಉಪಾಧ್ಯಕ್ಷ ಭುವನೇಶ್ವರಿ ಯಕ್ಕಂಚಿ, ಉಪನ್ಯಾಸಕಿ ಅರ್ಚನಾ ಪೂಜಾರಿ, ಗ್ರೇಡ್ 2 ತಹಶಿಲ್ದಾರ ಮಹಾದೇವ ಬಿರಾದಾರ, ತಾ.ಪಂ ಶಿವಾನಂದ ಕಲ್ಲಾಪೂರ,ಸ ಮಾಜ ಕಲ್ಯಾಣ ಅಧಿಕಾರಿ ಪರಶುರಾಮ ಪತ್ತಾರ, ಕ್ಷೇತ್ರ ಶಿಕ್ಷಣಾಧಿಕಾರಿ ಎಮ್ ಆರ್ ಮುಂಜಿ, ತಾಲೂಕಾ ವೈದ್ಯಾಧಿಕಾರಿ ಬಸಗೌಡ ಕಾಗೆ, ಸಮಾಜ ಕಲ್ಯಾಣ ಇಲಾಖೆ ಕಛೇರಿ ಅಧಿಕ್ಷಕ ಸದಾಶಿವ ಮಾಂಗ, ನಿಲಯ ಪಾಲಕ ರಾಜಶೇಖರ ಹೀರೆಮನಿ, ಓಗೆಪ್ಪ ಅರಟಾಳ, ಚಿದಾನಂದ ಬಡಕಂಬಿ, ಚಂದ್ರಕಾಂತ ಕಾಂಬಳೆ, ದುಂಡಪ್ಪ ಗೂಳಪ್ಪನ್ನವರ, ಶೃತಿ ಘಟಕಾಂಬಳೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ನಾಡಿಗೆ ಒಳಿತಾಗಲಿ, ಮಳೆ ಸುರಿಯಲಿ ಎಂಬ ಭಕ್ತನ ವಿಶಿಷ್ಟ ಧಾರ್ಮಿಕ ನಂಬಿಕೆ

# ಅನಾವೃಷ್ಟಿ ನಿವಾರಣೆಗೆ ಫ್ರಿಜ್‌ನಲ್ಲೇ ಗಣೇಶ ಪ್ರತಿಷ್ಠಾಪನೆ

■ ಉದಯರಶ್ಮಿ ದಿನಪತ್ರಿಕೆ

ಅಫಜಲಪುರ: ನಾಡಿನಲ್ಲಿ ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗಲಿ, ಜನ–ಜಾನುವಾರುಗಳಿಗೆ ನೀರಿನ ಕೊರತೆ ನೀಗಲಿ ಎಂಬ ಧಾರ್ಮಿಕ ನಂಬಿಕೆಯಿಂದ ತಂಪು ಪಾನೀಯ ಮಾರಾಟ ಮಾಡುವ ಗೂಡಂಗಡಿ ಮಾಲೀಕರೊಬ್ಬರು ತಮ್ಮ ಅಂಗಡಿಯ ಫ್ರಿಜ್‌ನಲ್ಲೇ ಗಣೇಶನ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿರುವ ಘಟನೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಗಮನ ಸೆಳೆಯುತ್ತಿದೆ.

ಅನಾವೃಷ್ಟಿಯಿಂದ ಮಳೆ ಕೊರತೆ ಎದುರಾಗಿರುವ ಹಿನ್ನೆಲೆಯಲ್ಲಿ,ವಿಘ್ನವಿನಾಯಕಗಣೇಶನಆರಾಧನೆಯ ಮೂಲಕ ನಾಡಿನಲ್ಲಿ ಮಳೆ ಸಮೃದ್ಧಿಯಾಗಲಿ ಹಾಗೂ ಎಲ್ಲರಿಗೂ ಒಳಿತಾಗಲಿ ಎಂಬ ಆಶಯದಿಂದ ಈ ವಿಶಿಷ್ಟ ರೀತಿಯ ಪ್ರತಿಷ್ಠಾಪನೆ ಮಾಡಲಾಗಿದೆ ಎಂದು ಗೂಡಂಗಡಿ ಮಾಲೀಕ ಮಲ್ಲಿನಾಥ ಕಳಸಿ ತಿಳಿಸಿದ್ದಾರೆ.

ಮುಖಂಡ ಸಿದ್ದು ಮ್ಯಾಕೇರಿ ಮಾತನಾಡಿ, ಮಳೆ ಕೊರತೆಯಿಂದ ರೈತರು ಹಾಗೂ ಗ್ರಾಮೀಣ ಭಾಗದ ಜನರು ಸಂಕಷ್ಟದಲ್ಲಿರುವ ಈ ಸಂದರ್ಭದಲ್ಲಿ, ವರುಣನ ಆಗಮನದಿಂದ ಉತ್ತಮ ಮಳೆಯಾಗಲಿ, ನಾಡು ಸುಭಿಕ್ಷವಾಗಲಿ ಎಂಬ ಪ್ರಾರ್ಥನೆಯೊಂದಿಗೆ ಈ ವಿಶಿಷ್ಟ ಧಾರ್ಮಿಕ ಆಚರಣೆ ನಡೆಸಲಾಗಿದೆ. ಗಣೇಶ ಚತುರ್ಥಿಯಂದು ಪ್ರತಿಷ್ಠಾಪಿಸಿದ ಗಣೇಶನನ್ನು



ಶುಕ್ರವಾರ ಸಂಜೆ ಸಂಭ್ರಮ ಸಡಗರದಿಂದ ವಿಸರ್ಜಿಸುವುದಾಗಿ ತಿಳಿಸಿದ ಅವರು, ಸರ್ಕಾರ ಈ ಕೂಡಲೇ ಅನಾವೃಷ್ಟಿಯಿಂದ ಹಾನಿಯಾದ ಈ ಭಾಗದ ರೈತರಿಗೆ ಪರಿಹಾರ ಒದಗಿಸಬೇಕೆಂದು ಆಗ್ರಹಿಸಿದರು. ಫ್ರಿಜ್‌ನಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪಿಸಿರುವ ವಿಷಯ ತಿಳಿಯುತ್ತಿದ್ದಂತೆ ಸ್ಥಳೀಯರು ಕುತೂಹಲದಿಂದ ಆಗಮಿಸಿ ವಿಶೇಷ ಪೂಜೆ ಹಾಗೂ ಪ್ರತಿಷ್ಠಾಪನೆಯನ್ನು ವೀಕ್ಷಿಸುತ್ತಿದ್ದಾರೆ. ಸಾಮಾನ್ಯವಾಗಿ ಆಹಾರ ಪದಾರ್ಥಗಳನ್ನು ಸಂಗ್ರಹಿಸಲು ಬಳಸುವ ಫ್ರಿಜ್ ಭಕ್ತಿಯ ಪ್ರತೀಕವಾಗಿ ಮಾರ್ಪಟ್ಟಿರುವುದು ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ. ಈ ವೇಳೆ ಹಿರಿಯ ಸಾಹಿತಿ ಬಿ. ಎಂ. ರಾವ್, ಬಸವರಾಜ ನೀಲಗಾರ, ಪುಂಡಲೀಕ ಯಳಮೇಲಿ, ಪ್ರಕಾಶ ಮಂಗಳೂರು ಹಾಗೂ ಇತರರಿದ್ದರು.

### ಸಾಂಪ್ರದಾಯಿಕ ದೃಷ್ಟಿಕೋನ

ಧಾರ್ಮಿಕ ಸಂಪ್ರದಾಯದ ಪ್ರಕಾರ, ಗಣೇಶನ ವಿಗ್ರಹವನ್ನು ಮನೆಯ ಈಶಾನ್ಯ ದಿಕ್ಕಿನಲ್ಲಿ ಅಥವಾ ಪೂರ್ವ ದಿಕ್ಕಿನಲ್ಲಿ, ಶುದ್ಧವಾದ ಪೂಜಾ ಕೋಣೆಯಲ್ಲಿ ಅಥವಾ ಸ್ವಚ್ಛವಾದ ಕಪಾಟಿನಲ್ಲಿ ಇರಿಸುವುದು ಉತ್ತಮ. ಈ ಸ್ಥಳಗಳು ಸಕಾರಾತ್ಮಕ ಶಕ್ತಿಯ ಹರಿವಿಗೆ ಸಹಾಯಕ ಎಂದು ಪರಿಗಣಿಸಲಾಗುತ್ತದೆ.

ಆದರೆ, ಸಾಂಪ್ರದಾಯಿಕ ನಿಯಮಗಳಿಗಿಂತ ಭಕ್ತಿಯ ಉದ್ದೇಶವೇ ಹೆಚ್ಚು ಮುಖ್ಯ. ನಿಮ್ಮ ಪ್ರಾರ್ಥನೆಯು ಪ್ರಾಮಾಣಿಕವಾಗಿದ್ದರೆ ಮತ್ತು ವಿಗ್ರಹದ ಮೇಲೆ ಗೌರವವಿದ್ದರೆ, ಸ್ಥಳದ ಕುರಿತಾದ ಕಟ್ಟುನಿಟ್ಟಾದ ನಿಯಮಗಳು ನಿಮ್ಮ ಮನಸ್ಸನ್ನು ಕಟ್ಟಿಹಾಕಬಾರದು. ಈ ಘಟನೆಯಲ್ಲಿ ಮಲ್ಲಿನಾಥ ಕಳಸಿ ಅವರ ಪ್ರಾರ್ಥನೆಯು ಸಮಾಜದ ಒಳಿತಿಗಾಗಿ, ರೈತರ ಬದುಕಿಗಾಗಿ ಎಂಬುದು ಸ್ಪಷ್ಟವಾಗಿದೆ. ಭಕ್ತಿಯ ಭಾವನೆಯೇ ಇಲ್ಲಿ ಪ್ರಧಾನವಾಗಿದೆ.

# ಕ್ರೀಡೆಗಳಿಂದ ಮಾನಸಿಕ ಒತ್ತಡ ನಿವಾರಣೆ :ಪ್ರೊ.ತೋಳನೂರ

■ ಉದಯರಶ್ಮಿ ದಿನಪತ್ರಿಕೆ

### ಸಚಿವ ಎಂ.ಬಿ.ಪಾಟೀಲರ ಜನ್ಮದಿನದ ಅಂಗವಾಗಿ ತಿಕೋಟಾದಲ್ಲಿ ಕ್ರಿಕೆಟ್ ಪಂದ್ಯಾವಳಿ

ತಿಕೋಟಾ: ಪಟ್ಟಣದ ಬಿ.ಎಲ್.ಡಿ.ಇ. ಸಂಸ್ಥೆಯ ಶ್ರೀ ಎ.ಬಿ.ಜತ್ತಿ ಕಾಲೇಜಿನ ಆವರಣದಲ್ಲಿ ನೂತನ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಆಯೋಜಿಸಿದ್ದ ಕ್ರಿಕೆಟ್ ಟೂರ್ನಮೆಂಟ್ ಕಾರ್ಯಕ್ರಮವನ್ನು ಶ್ರೀ ಎ.ಬಿ.ಜತ್ತಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲೆ ಕೆ.ಎ.ಹೊಸಟ್ಟಿ, ಉಪಪ್ರಾಚಾರ್ಯ ಜಗದೀಶಗೌಡ ಪಾಟೀಲ, ಪದವಿ ಕಾಲೇಜಿನ ಪ್ರಾಂಶುಪಾಲ ಪ್ರೊ.ಪಿ. ಎಸ್.ತೋಳನೂರ , ಅವರು ಕ್ರೀಡಾಕೂಟಕ್ಕೆ ಚಾಲನೆ ನೀಡಿದರು.

ನಂತರ ಮಹಾವಿದ್ಯಾಲಯದ ಪ್ರಾಂಶುಪಾಲ ಪ್ರೊ.ಪಿ.ಎಸ್.ತೋಳನೂರ ಅವರು ಮಾತನಾಡಿ, ನಮ್ಮ ಬಿ .ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷರು, ರಾಜ್ಯ ಕಂಡ ಪ್ರಬುದ್ಧ ರಾಜಕೀಯ ನಾಯಕರಾದ ಡಾ. ಎಂ.ಬಿ.ಪಾಟೀಲರ ಹುಟ್ಟು ಹಬ್ಬದ ನಿಮಿತ್ತ ಅಂತರ್ ಕಾಲೇಜು ಕ್ರಿಕೆಟ್ ಟೂರ್ನಮೆಂಟ್ ತಿಕೋಟಾ ಆವರಣದ ಎಲ್ಲಾ ಶಾಲಾ ಕಾಲೇಜುಗಳ ಸಹಯೋಗದಲ್ಲಿ ಆಯೋಜನೆ ಮಾಡಲಾಗಿದೆ. ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಸದಾ ಶೈಕ್ಷಣಿಕ ಪಾಠ ಪ್ರವಚನಗಳಲ್ಲಿ ಸಮಯ ಕಳೆಯುವುದರಿಂದ ಇಂದಿನ ದಿನಗಳಲ್ಲಿ ಮಾನಸಿಕ ಒತ್ತಡ ಹೆಚ್ಚಾಗಿ ಕಂಡು ಬರುತ್ತಿದೆ. ಇಂತಹ ಒತ್ತಡಗಳಿಂದ ಹೊರಬಂದು ದೈಹಿಕ ಕಸರತ್ತಿನಿಂದ ಆಟಗಳಲ್ಲಿ ಸಕ್ರೀಯವಾಗಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳಿಗಾಗಲಿ, ಶಿಕ್ಷಕರಿಗಾಗಲಿ ಒಂದು ರೀತಿಯ ಆನಂದ ಉಂಟಾಗುತ್ತದೆ. ಇಂತಹ ಕ್ರೀಡೆಗಳು ಮಾನಸಿಕ ಒತ್ತಡ ನಿವಾರಣೆ ಮಾಡಿ ಶೈಕ್ಷಣಿಕ ಚಟುವಟಿಕೆಗಳಲ್ಲಿ ಹೆಚ್ಚು ಹೆಚ್ಚು ಸಮಯ ತೊಡಗಿಸಿಕೊಳ್ಳಲು ಪುಷ್ಠಿ ನೀಡುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಚೇರಿ ಅಧೀಕ್ಷಕ ಎಸ್.ಪಿ.ಪಾಟೀಲ, ದೈಹಿಕ ಶಿಕ್ಷಣ ನಿರ್ದೇಶಕರಾದ




ಬಿ.ಆರ್.ದೇಸಾಯಿ, ದೇಯಪ್ಪಗೌಡ ಪಾಟೀಲ , ಭೀಮಣ್ಣ ನಾಟೀಕಾರ, ನರ್ಸಿಂಗ್ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ.ಸಂತೋಷಕುಮಾರ ಇಂಡಿ, ಐಕ್ಯೂಎಸಿ ಸಂಯೋಜಕ ಪ್ರೊ.ಬಿ.ಎಸ್.ಬೆಳಗಲಿ, ಮುಖ್ಯ ಶಿಕ್ಷಕ ಅಭಿಷೇಕ ಬಗಲಿ, ದೈಹಿಕ ಶಿಕ್ಷಕ ಕಲ್ಯಾಣಿ, ಮಲ್ಲಿಕಾರ್ಜುನ ಸಾಹು ಕುರ್ಪಿ ಸೇರಿದಂತೆ ಹಲವರಿದ್ದರು.

# ಮಗುವನ್ನು ಚಿವುಟಿ ತೊಟ್ಟಿಲನ್ನೂ ತೂಗಿ

■ ಉದಯರಶ್ಮಿ ದಿನಪತ್ರಿಕೆ

‘ದೀಪದಿಂದ ದೀಪವಾ ಹಚ್ಚಬೇಕು ಮಾನವ ಪ್ರೀತಿಯಿಂದ ಪ್ರೀತಿ ಬೆಳಗಲೂ..

ಎಂಬ ಹಾಡನ್ನು ಕೇಳುತ್ತಲೇ ಬೆಳೆದ, ಪ್ರತೀಕ್ಷಣವೂ ಸಂಭ್ರಮದಿಂದ ದೀಪಾವಳಿ ಆಚರಿಸುವ ನಮಗೆ ಡಿಸೆಂಬರ್ 10, 2025ರಲ್ಲಿ ಯುನೆಸ್ಕೊ(UNESCO) ಸಂಸ್ಥೆಯ ಸಾಂಸ್ಕೃತಿ–ಕ ಪರಂಪರೆಯ ಪ್ರತಿನಿಧಿ ಪಟ್ಟಿ(Representative List of the Intangible Cultural Heritage of Humanity) ಗೆ ಭಾರತೀಯರ ದೀಪಾವಳಿ ಹಬ್ಬ ಸೇರಿದೆ ಎಂಬ ಸಂತಸವನ್ನು ನಮ್ಮ ಪ್ರಧಾನಿ ಮೋದಿಜಿ ಹಂಚಿಕೊಂಡಾಗ, ಉಂಟಾದ ಸಂತಸ



ಮೈನವಿರೇಳಿಸುವಂಥದ್ದು. ಜೊತೆಯಲ್ಲಿಯೇ ಆ ನಿಟ್ಟಿನಲ್ಲಿ ಜವಾಬ್ದಾ–ರಿಯನ್ನು ಸಹ ಹೆಚ್ಚಿಸುವಂಥದ್ದು

ಆದರೆ ಬೆಳಕಿನ ಹಬ್ಬ ದೀಪಾವಳಿಯನ್ನು ಎಷ್ಟು ಜವಾಬ್ದಾ–ರಿಯಿಂದ ಆಚರಿಸುತ್ತಿದ್ದೇವೆ ಎಂಬುದು ಒಮ್ಮೆ ಯೋಚಿಸಬೇಕಾದ ವಿಷಯ. ದೀಪದಿಂದ ದೀಪ ಹಚ್ಚುವುದರ ಬದಲಿಗೆ ಪಟಾಕಿಯಿಂದ ಪಟಾಕಿ ಹಚ್ಚುವುದೇ ಹೆಚ್ಚಾಗಿಬಿಟ್ಟಿದೆ.




"ಪಟಾಕಿ ಹೊಡಿಬೇಡಿ, ಚೂರುಪಾರು ಉಳಿದುಕೊಂಡಿರುವ ಒಳ್ಳೆಯ ವಾತಾವರಣವನ್ನು ಹಾಳುಮಾಡಬೇಡಿ" ಎಂದು ಹೇಳುತ್ತಲೇ ಇದ್ದರೂ, ಕೇಳದೆ ಮುಂದುವರೆಸುವ, ಮುಂದುವರೆಯುವ ಪಟಾಕಿ ಶಬ್ದವನ್ನು ಸಹಿಸುವುದೇ ತ್ರಾಸವಾಗಿಬಿಟ್ಟಿದೆ. ರಾತ್ರಿಯೆಲ್ಲ ಪಟಾಕಿ ಹೊಡೆಯುತ್ತಲೇ ಇದ್ದರೆ, ಇತರೆ ಜನರಿಗೆ ಎಷ್ಟು ತೊಂದರೆ ಆಗಬಹುದು, ವಾತಾವರಣ ಎಷ್ಟು ಹಾಳಾಗಬಹುದು, ಅದು ಪಕ್ಷಿಸಂಕುಲದ ಮೇಲೆ ಎಷ್ಟು ಪರಿಣಾಮ ಬೀರಬಹುದು ಎಂಬುದನ್ನು ಯೋಚಿಸಬೇಕಾಗಿದೆ.

ಶಬ್ದ ಮಾಲಿನ್ಯ, ವಾಯುಮಾಲಿನ್ಯ ಎರಡನ್ನೂ ಮಾಡಿ. ಇಷ್ಟು ದುಷ್ಪರಿಣಾಮ ಬೀರುವ ಪಟಾಕಿ ಉತ್ಪಾದನೆಗೆ ಯಾವ ಉದ್ದೇಶಕ್ಕಾಗಿ ಉತ್ತೇಜನ ಸಿಗುತ್ತಿದೆ ಎಂಬುದೇ ಅರ್ಥವಾಗುತ್ತಿಲ್ಲ

ಮಧ್ಯಪಾನ ಮಾಡುವುದು ಅಪರಾದ ಎಂದು, ಡ್ರಿಂಕ್ಸ್ ಮಾಡಿ ವಾಹನ ಚಲಾಯಿಸಿದರೆ ದಂಡ ವಿಧಿಸಲಾಗುತ್ತದೆ. ಅದರೆ ಬಾರ್‌ಗಳನ್ನು ತೆರೆಯಲು ಮಾತ್ರ ಪರವಾನಗಿ ಸಿಗುತ್ತಲೇ ಇದೆ.

ಹುಡುಗಿಯ ಪ್ರೀತಿಯಲ್ಲಿ ಬಿದ್ದರೆ ಖುಷಿಗೆ ಕುಡಿಯುವುದು. ಅವಳು ಕೈಕೊಟ್ಟರೆ ದುಃಖಕ್ಕೆ ಕುಡಿಯುವುದು. ವ್ಯಾಪಾರದಲ್ಲಿ ನಷ್ಟವಾದರೆ ಬೇಸರದಿಂದ ಕುಡಿಯುವುದು. ಆದಾಯ ಹೆಚ್ಚಿದರೆ ಆ ಹಣವನ್ನು ಕರಗಿಸುವುದಕ್ಕೆ ಗೆಳಯರೊಂದಿಗೆ ಕೂಡಿ ಕುಡಿಯುವುದು. ನೋವು ಹೆಚ್ಚಾದರು ಕುಡಿಯೋದು, ಸಂತಸ ಜಾಸ್ತಿಯಾದರು



ಕುಡಿಯೋದು. ಅವಮಾನ ಆದರು ಕುಡಿಯೋದು ಸನ್ಮಾನ ಆದ–ರು ಕುಡಿಯೋದು. ಇವಾಗತ್ತಾನೆ ಹರೆಯಕ್ಕೆ ಬರುತ್ತಿರುವವರೂ ಕುಡಿಯುತ್ತಾರೆ, ಹರನ ಹತ್ತಿರ ಹೋಗಲು ದಿನ ಎಣಿಸುತ್ತಿರುವವರೂ ಸಹ ಕುಡಿಯುತ್ತಾರೆ. ಏನೋ ಒಂದು ಒಟ್ಟಿನಲ್ಲಿ ಎಲ್ಲದಕ್ಕು ಕುಡಿಯೋದೆ. ತಾವು ಗಳಿಸಿರೋ ಹಣವನ್ನು, ದೇವರು ಕೊಟ್ಟಿರೋ ಲಿವರನ್ನ ಹಾಳುಮಾಡಿಕೊಳ್ಳುವತನಕ ಕುಡಿತ್ತಾನೇ ಇರುವುದು. ಮದ್ಯಪಾನ ಸೇವನೆಯಿಂದ ಸಂಸಾರ ಕಲಹಗಳು, ಸಾಮಾಜಿಕ ಕಲಹಗಳು ನಿತ್ಯವೂ ನಡೆಯುತ್ತಲೇ ಇವೆ. ಆದರೂ ಮಧ್ಯಪಾನದ ಮಾರಾಟ ಹೆಚ್ಚಾಗುತ್ತಿದೆ ಎಂದರೆ, ಏನೆಂದು ತಿಳಿಯುವುದು?

ಸಿಗರೇಟ್ ಮೇಲೆ "ಆರೋಗ್ಯಕ್ಕೆ ಹಾನಿಕಾರಕ" ಎಂದು ಬರೆಸಿ, ಅದೇ ಸಿಗರೇಟನ್ನ ತಯಾರಿಸಿ ಮಾರಲು ಪರವಾನಗಿ ಕೊಡುವುದು, ‘ಇರುವ ವಿಷಯವನ್ನು ತಿಳಿಸಿಕೊಡುತ್ತಿದ್ದೇವೆ. ಅಷ್ಟಾದಮೇಲೂ



ಬಳಸಿದರೆ ಅವರಿಷ್ಟ’ ಎಂದಿರಬಹುದೆ? ಅದು ತಿಳಿಯದು

ಪ್ಲಾಸ್ಟಿಕ್ ಕವರ್ ಬಳಸಿದರೆ ದಂಡ ಕೊಡಬೇಕಾಗುತ್ತದೆ ಎಂಬ ಭಯದಲ್ಲಿ, ಮಾರುಕಟ್ಟೆಗಳಲ್ಲಿ ಪ್ಲಾಸ್ಟಿಕ್ ಕವರ್‌ಗಳು ಹೊರಗೆ ಕಾಣಿಸದಂತೆ ಬಚ್ಚಿಟ್ಟುಕೊಂಡು ಕೊಡುತ್ತಾರೆ. ಆದರೆ ಇಲ್ಲಿ ಹೀಗೆ ಪುಟ್ಟ ಪುಟ್ಟದಾಗಿ ಪರಿಶೀಲಿಸಿ ಫೈನ್ ಹಾಕಿ ಭಯ ಹುಟ್ಟಿಸುವ ಬದಲಿಗೆ, ನೇರವಾಗಿ ಅದರ ಉತ್ಪಾದನೆಯಲ್ಲೊ ಅಥವಾ ಡೀಲರ್‌ಗಳ ಹಂತದಲ್ಲೊ ಅಂದರೆ ಮೂಲ ಹಂತದಲ್ಲೆ ಕ್ರಮ ಕೈಗೊಳ್ಳಬಹುದಲ್ಲ?

ಡ್ರಗ್ಸ್ ಮಾಫಿಯಾ ಎಷ್ಟರಮಟ್ಟಿಗೆ ಮುಂದುವರೆದಿದೆ ಎಂದರೆ, ಶಾಲಾ–ಕಾಲೇಜು ಮಕ್ಕಳುಗಳಿಗೆಲ್ಲ ‘ಎಲ್ಲಿ ಸಿಗುತ್ತದೆ’ ಎಂಬ ಬಗ್ಗೆ ಅರಿವಿರುವಷ್ಟು ಸುಲಭವಾಗಿ ಎಲ್ಲರಿಗು ದೊರೆಯುತ್ತಿದೆ. ಅದಕ್ಕೆ ಕಡಿವಾಣ ಹಾಕಲಾಗುತ್ತಿಲ್ಲವೆ? ಮೆಲ್ಲಗೆ ಮಗುವನ್ನು ಚಿವುಟಿ ಆಮೇಲೆ ಸಮಾಧಾನ ಮಾಡುವ ಹಾಗೆ ನಟಿಸುವಂತೆ, ಅತ್ತ ತೆರಿಗೆಯ ಆದ–ಾಯ ಹೆಚ್ಚಿಗೆ ಬರುವ ಎಲ್ಲವನ್ನು ಉತ್ಪಾದಿಸುವುದಕ್ಕೆ ಪ್ರೋತ್ಸಾಹ ಕೊಟ್ಟು, ಇತ್ತ ಪರಿಸರ ಮತ್ತು ಜನಸಾಮಾನ್ಯರ ಆರೋಗ್ಯದ ಬಗ್ಗೆ ಖಾಳಜಿ ತೋರಿಸುಂತೆ ನಟಿಸಲಾಗುತ್ತಿದೆಯೆ? ಗೊತ್ತಿಲ್ಲ.

ನಿಜವಾಗಿ ನಿದ್ದೆಮಾಡುತ್ತಿರುವವರನ್ನ ಎಬ್ಬಿಸಬಹುದು, ನಿದ್ರೆ ಮಾಡುವಂತೆ ನಟಿಸುವವರನ್ನಲ್ಲ.

# ಮನುಷ್ಯನನ್ನು ಮನುಷ್ಯನಾಗಿಸುವ ಸಂಸ್ಕಾರ

**ಉದಯರಶ್ಮಿ ದಿನಪತ್ರಿಕೆ**

ಮಾನವನು ಈ ಸಮಾಜದಲ್ಲಿ ಕಲಿತು, ಅನುಭವಿಸಿ ಗಳಿಸಿದ ಅತ್ಯಂತ ಅಮೂಲ್ಯ ಆಸ್ತಿಯೇ ಸಂಸ್ಕೃತಿ. ಹಣ, ಆಸ್ತಿ, ಅಧಿಕಾರ, ಅಂತಸ್ತುಗಳು ಮನುಷ್ಯನ ಬದುಕಿಗೆ ಅಗತ್ಯವಾಗಬಹುದು; ಆದರೆ ಇವೆಲ್ಲಕ್ಕಿಂತ ಮಿಗಿಲಾಗಿ ವ್ಯಕ್ತಿಯ ಬದುಕಿಗೆ ಮೌಲ್ಯ, ಘನತೆ ಮತ್ತು ಅರ್ಥವನ್ನು ನೀಡುವುದು ಸಂಸ್ಕೃತಿ. 'ಸಂಸ್ಕೃತಿ' ಎಂಬುದು ಒಂದು ನಿರ್ದಿಷ್ಟ ವ್ಯಾಖ್ಯೆಯೊಳಗೆ ಸಂಪೂರ್ಣವಾಗಿ ಹಿಡಿದಿಡಲಾಗದ ವಿರಾಟ ಶಕ್ತಿ. ಅದು ಮನುಷ್ಯನ ವಿಚಾರ, ಆಚಾರ, ನಡೆ-ನುಡಿ, ಮೌಲ್ಯಗಳು ಹಾಗೂ ಬದುಕಿನ ರೀತಿ-ನೀತಿಗಳಲ್ಲಿ ವ್ಯಕ್ತವಾಗುತ್ತದೆ. ವ್ಯಕ್ತಿಯ ವ್ಯಕ್ತಿತ್ವದ ಬೆಳವಣಿಗೆಯಲ್ಲಿ ಸಂಸ್ಕೃತಿಯ ಪಾತ್ರ ಅತ್ಯಂತ ಮಹತ್ವದ್ದು. ಮನುಷ್ಯನು ಕೇವಲ ದೈಹಿಕವಾಗಿ ಬೆಳೆಯುವುದರಿಂದ ಪರಿಪೂರ್ಣನಾಗುವುದಿಲ್ಲ; ಆತನಲ್ಲಿ ಮಾನವೀಯ ಮೌಲ್ಯಗಳು, ಸಂಸ್ಕಾರ ಮತ್ತು ಸಾಮಾಜಿಕ ಜವಾಬ್ದಾರಿ ಬೆಳೆದಾಗ ಮಾತ್ರ ಆತ ನಿಜವಾದ ಅರ್ಥದಲ್ಲಿ ಮನುಷ್ಯನಾಗುತ್ತಾನೆ.



ನಮ್ಮ ದೇಶದ ಸಂಸ್ಕೃತಿ ವೈವಿಧ್ಯಮಯ ಹಾಗೂ ಶ್ರೀಮಂತವಾದುದು. ಭಾಷೆ, ವೇಷ-ಭೂಷಣ, ಆಹಾರ ಪದ್ಧತಿ, ಆಚಾರ-ವಿಚಾರ, ಹಬ್ಬ-ಹರಿದಿನಗಳು, ಕಲೆ, ಸಾಹಿತ್ಯ, ಪರಂಪರೆ ಹಾಗೂ ಜೀವನಶೈಲಿಯಲ್ಲಿ ಇದರ ವೈಶಿಷ್ಟ್ಯವನ್ನು ಕಾಣಬಹುದು. ಇವು ಕೇವಲ ಆಚರಣೆಗಳಲ್ಲ; ಅವುಗಳ ಹಿಂದೆ ಹಲವು ಮೌಲ್ಯಗಳು ಅಡಗಿವೆ. ಹಿರಿಯರಿಗೆ ಗೌರವ ನೀಡುವುದು, ಕಿರಿಯರನ್ನು ಪ್ರೀತಿಸುವುದು, ಅತಿಥಿಯನ್ನು ಸತ್ಕರಿಸುವುದು, ಪರಸ್ಪರ ಸಹಕಾರದಿಂದ ಬದುಕುವುದು, ಪ್ರಕೃತಿಯನ್ನು ಗೌರವಿಸುವುದು ಹಾಗೂ ಸಮಾಜದ ಒಳಿತನ್ನು ಬಯಸುವುದು ನಮ್ಮ ಸಂಸ್ಕೃತಿಯ ಪ್ರಮುಖ ಅಂಶಗಳಾಗಿವೆ. ಇಂತಹ ಸಂಸ್ಕೃತಿಯನ್ನು ಉಳಿಸಿ, ಬೆಳೆಸಿ, ಮುಂದಿನ ಪೀಳಿಗೆಗೆ ತಲುಪಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ.

ಸಂಸ್ಕೃತಿಯು ತನ್ನದೇ ಆದ ಗುಣಲಕ್ಷಣಗಳನ್ನು ಹೊಂದಿದೆ. ಅದು ಎಲ್ಲಾ ಸಮಾಜಗಳಲ್ಲಿಯೂ, ಎಲ್ಲಾ ಕಾಲದಲ್ಲಿಯೂ ಏಕರೂಪವಾಗಿರಬೇಕೆಂದೇನೂ ಇಲ್ಲ. ಕಾಲಕಾಲಕ್ಕೆ ಬದಲಾಗುವ ಪರಂಪರೆ ಹಾಗೂ ಪ್ರಕ್ರಿಯೆಯನ್ನು ಸಂಸ್ಕೃತಿ ಹೊಂದಿರುತ್ತದೆ. ಮನುಷ್ಯನ ಜೀವನಶೈಲಿ ಬದಲಾಗುವಂತೆ ಸಂಸ್ಕೃತಿಯ ಕೆಲವು ರೂಪಗಳೂ ಬದಲಾಗುತ್ತವೆ. ಆದರೆ ಅದರ ಮೂಲ ಮೌಲ್ಯಗಳು ಉಳಿಯಬೇಕು. ಪರಂಪರೆಯಲ್ಲಿರುವ ಉತ್ತಮವಾದುದನ್ನು ಉಳಿಸಿಕೊಂಡು, ಕಾಲಕ್ಕೆ ತಕ್ಕ ಬದಲಾವಣೆಗಳನ್ನು ವಿವೇಕದಿಂದ



ಸ್ವೀಕರಿಸುವುದೇ ಆರೋಗ್ಯಕರ ಸಂಸ್ಕೃತಿಯ ಬೆಳವಣಿಗೆ. ಹಳೆಯದೆಲ್ಲ ಒಳ್ಳೆಯದು, ಹೊಸದೆಲ್ಲ ಕೆಟ್ಟದ್ದು ಎಂಬ ಮನೋಭಾವವೂ ಸರಿಯಲ್ಲ; ಹೊಸದೆಲ್ಲ ಶ್ರೇಷ್ಠ, ಹಳೆಯದೆಲ್ಲ ಅನಾವಶ್ಯಕ ಎಂಬ ದೃಷ್ಟಿಕೋನವೂ ಸೂಕ್ತವಲ್ಲ.

ಸಂಸ್ಕೃತಿಯು ಮನುಷ್ಯನ ಬಯಕೆಗಳು, ಆಸೆ-ಆಕಾಂಕ್ಷೆಗಳಿಗೆ ಸರಿಯಾದ ದಿಕ್ಕನ್ನು ನೀಡುತ್ತದೆ. ಸುಖ, ಶಾಂತಿ ಮತ್ತು ನೆಮ್ಮದಿಯ ಬದುಕಿಗೆ ಬೇಕಾದ ಮೌಲ್ಯಗಳನ್ನು ಕಲಿಸುತ್ತದೆ. ಮುಖ್ಯವಾಗಿ, ಮನುಷ್ಯನ ಅನೇಕ ಚಟುವಟಿಕೆಗಳನ್ನು ಸ್ವಯಂಪ್ರೇರಣೆಯಿಂದ ನಿಯಂತ್ರಿಸುವ ಶಕ್ತಿ ಸಂಸ್ಕೃತಿಗಿದೆ. ಹೊರಗಿನ ಕಾನೂನು ಅಥವಾ ಶಿಕ್ಷೆಯ ಭಯದಿಂದ ತಪ್ಪು ಮಾಡದಿರುವುದಕ್ಕಿಂತ, ತನ್ನ ಅಂತರಂಗದ ಸಂಸ್ಕಾರದಿಂದ ತಪ್ಪು ಮಾಡಬಾರದು ಎಂದು ನಿರ್ಧರಿಸುವ ಗುಣವೇ ಶ್ರೇಷ್ಠ. ಈ ಒಳಗಿನ ಅರಿವು ಮತ್ತು ಆತ್ಮನಿಯಂತ್ರಣವನ್ನು ಬೆಳೆಸುವುದೇ ಸಂಸ್ಕೃತಿಯ ನಿಜವಾದ ಶಕ್ತಿ.

ಹಾಗಾದರೆ ಈ ಸಂಸ್ಕೃತಿ ನಮ್ಮಿಂದ ಏನನ್ನು ಮಾಡಿಸುತ್ತದೆ? ಎಂಬ ಪ್ರಶ್ನೆ ಸಹಜ. ಸಂಸ್ಕೃತಿ ಮಾನವ ಪ್ರಾಣಿಯನ್ನು ಮನುಷ್ಯನನ್ನಾಗಿ ಮಾಡುತ್ತದೆ. ಮಾನವನ ನಡತೆಯನ್ನು ಕ್ರಮಬದ್ಧಗೊಳಿಸಿ, ಆತನನ್ನು ಸಮೂಹ ಜೀವನಕ್ಕೆ ಸಿದ್ಧಗೊಳಿಸುವುದು ಸಂಸ್ಕೃತಿಯ ಪ್ರಮುಖ ಕಾರ್ಯ. ಯಾವ ಬಗೆಯ ಆಹಾರ ಸೇವಿಸಬೇಕು, ಹೇಗೆ ಸೇವಿಸಬೇಕು, ತನ್ನನ್ನು ತಾನು ಹೇಗೆ ರಕ್ಷಿಸಿಕೊಳ್ಳಬೇಕು, ಇತರರೊಂದಿಗೆ ಹೇಗೆ ವರ್ತಿಸಬೇಕು, ಯಾವ ಸಂದರ್ಭದಲ್ಲಿ ಹೇಗೆ ಮಾತನಾಡಬೇಕು ಎಂಬುದನ್ನು ಅದು ಕಲಿಸುತ್ತದೆ. ಇದರ ಮೂಲಕ ವ್ಯಕ್ತಿಯಲ್ಲಿ ಶಿಸ್ತು, ಸಂಯಮ, ವಿನಯ, ಜವಾಬ್ದಾರಿ ಮತ್ತು ಸಹಬಾಳ್ವೆಯ ಗುಣಗಳು ಬೆಳೆಯುತ್ತವೆ.

ಮನುಷ್ಯನು ಒಬ್ಬಂಟಿಯಾಗಿ ಬದುಕುವ ಜೀವಿಯಲ್ಲ. ಆತ ಕುಟುಂಬದ ಸದಸ್ಯ, ಸಮಾಜದ ಒಂದು ಭಾಗ ಮತ್ತು ದೇಶದ ನಾಗರಿಕ. ಹೀಗಾಗಿ ಆತನ ಬದುಕಿನಲ್ಲಿ ಸಾಮಾಜಿಕ ಜವಾಬ್ದಾರಿ ಅತ್ಯಗತ್ಯ. ಇನ್ನೊಬ್ಬರ ನೋವನ್ನು ಅರ್ಥಮಾಡಿಕೊಳ್ಳುವುದು, ಅಗತ್ಯವಿರುವವರಿಗೆ ನೆರವಾಗುವುದು, ಹಿರಿಯರನ್ನು ಗೌರವಿಸುವುದು, ಕಿರಿಯರನ್ನು ಪ್ರೀತಿಯಿಂದ ಕಾಣುವುದು, ಸಾರ್ವಜನಿಕ ಆಸ್ತಿಯನ್ನು ಕಾಪಾಡುವುದು ಹಾಗೂ ಪರಿಸರವನ್ನು ಸಂರಕ್ಷಿಸುವುದು ಉತ್ತಮ ಸಂಸ್ಕಾರದ ಲಕ್ಷಣಗಳು. ಇವುಗಳನ್ನು ಕೇವಲ ಪುಸ್ತಕ ಓದುವುದರಿಂದ ಕಲಿಯಲು ಸಾಧ್ಯವಿಲ್ಲ. ಬದುಕಿನ ಅನುಭವ, ಕುಟುಂಬದ ವಾತಾವರಣ ಮತ್ತು ಶಿಕ್ಷಣದ ಮೂಲಕ ಇವು ವ್ಯಕ್ತಿಯಲ್ಲಿ ಬೆಳೆದು ಬರುತ್ತವೆ.

ಇಲ್ಲಿ ಶಿಕ್ಷಣದ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಶಿಕ್ಷಣವೆಂದರೆ ಕೇವಲ ಅಂಕಗಳನ್ನು ಗಳಿಸುವುದು, ಪದವಿ ಪಡೆಯುವುದು ಅಥವಾ ಉದ್ಯೋಗಕ್ಕೆ ಅರ್ಹತೆ ಹೊಂದುವುದು ಮಾತ್ರವಲ್ಲ. ಶಿಕ್ಷಣವು ವ್ಯಕ್ತಿಯ ಬುದ್ಧಿಯನ್ನು ಬೆಳೆಸುವುದರ ಜೊತೆಗೆ ಆತನ ಮನಸ್ಸನ್ನೂ ಸಂಸ್ಕರಿಸಬೇಕು. ಜ್ಞಾನವಿರುವ ವ್ಯಕ್ತಿಗೆ ಆ ಜ್ಞಾನವನ್ನು ಸರಿಯಾದ ರೀತಿಯಲ್ಲಿ ಬಳಸುವ ವಿವೇಕವಿರಬೇಕು. ವಿದ್ಯೆಯೊಂದಿಗೆ ವಿನಯ, ಜ್ಞಾನದೊಂದಿಗೆ ಜವಾಬ್ದಾರಿ, ಸಾಮರ್ಥ್ಯದೊಂದಿಗೆ ಮಾನವೀಯತೆ ಸೇರಿದಾಗ ಮಾತ್ರ ಶಿಕ್ಷಣ ಸಾರ್ಥಕವಾಗುತ್ತದೆ. ಆದ್ದರಿಂದ ಶಿಕ್ಷಣದ ಗುರಿ ಕೇವಲ ವಿದ್ಯಾವಂತರನ್ನು ಸೃಷ್ಟಿಸುವುದಾಗಿರದೆ, ಸುಸಂಸ್ಕೃತ ನಾಗರಿಕರನ್ನು ರೂಪಿಸುವುದಾಗಿರಬೇಕು.

ಇಂದಿನ ಆಧುನಿಕ ಯುಗದಲ್ಲಿ ತಂತ್ರಜ್ಞಾನ ಮನುಷ್ಯನ ಬದುಕಿನಲ್ಲಿ ಮಹತ್ತರ ಬದಲಾವಣೆ ತಂದಿದೆ. ಮೊಬೈಲ್, ಅಂತರ್ಜಾಲ ಮತ್ತು ಸಾಮಾಜಿಕ ಜಾಲತಾಣಗಳು ಜಗತ್ತನ್ನು ನಮ್ಮ ಕೈಗೆ ತಂದಿವೆ. ಆದರೆ ತಂತ್ರಜ್ಞಾನವನ್ನು ಬಳಸುವ ವಿವೇಕ ಇಲ್ಲದಿದ್ದರೆ ಅದು ಮಾನವೀಯ ಸಂಬಂಧಗಳ ಮೇಲೆ ಪರಿಣಾಮ ಬೀರಬಹುದು. ಒಂದೇ ಮನೆಯಲ್ಲಿರುವವರು ಪರಸ್ಪರ ಮಾತನಾಡುವುದಕ್ಕಿಂತ ಮೊಬೈಲ್‌ನಲ್ಲಿ ಹೆಚ್ಚು ತೊಡಗಿಕೊಳ್ಳುವ ಪರಿಸ್ಥಿತಿಯೂ ಇದೆ. ಹೀಗಾಗಿ ತಂತ್ರಜ್ಞಾನವನ್ನು ತಿರಸ್ಕರಿಸುವ ಅಗತ್ಯವಿಲ್ಲ; ಅದನ್ನು ಮಿತವಾಗಿ, ಜವಾಬ್ದಾರಿಯಿಂದ ಮತ್ತು ವಿವೇಕದಿಂದ ಬಳಸುವ ಸಂಸ್ಕಾರವನ್ನು ಬೆಳೆಸಬೇಕಾಗಿದೆ.

ವಿಪರ್ಯಾಸವೆಂದರೆ, ಸಂಸ್ಕೃತಿಯನ್ನು ಹೊಂದಿರುವ ಸುಸಂಸ್ಕೃತರೆಂದು ಕರೆಸಿಕೊಳ್ಳುವ ನಾವುಗಳೇ ಕೆಲವೊಮ್ಮೆ ಸಂಸ್ಕೃತಿಯ ಮೂಲ ತತ್ವಕ್ಕೆ ವಿರುದ್ಧವಾಗಿ ನಡೆದುಕೊಳ್ಳುತ್ತೇವೆ. ನಮ್ಮ ಸಂಸ್ಕೃತಿಯೇ ಶ್ರೇಷ್ಠ, ಮತ್ತೊಬ್ಬರ ಸಂಸ್ಕೃತಿ ಕೀಳು ಎಂಬ ಮನೋಭಾವ ಸಂಸ್ಕೃತಿಯ ಲಕ್ಷಣವಲ್ಲ. ನಿಜವಾದ ಸಂಸ್ಕೃತಿ ತನ್ನ ಸಂಸ್ಕೃತಿಯನ್ನು ಗೌರವಿಸುವುದರ ಜೊತೆಗೆ ಇತರರ ಸಂಸ್ಕೃತಿಯನ್ನೂ ಗೌರವಿಸಲು ಕಲಿಸುತ್ತದೆ. ಬಲವಂತವಾಗಿ ಒಂದು ಸಂಸ್ಕೃತಿಯ ಜನರನ್ನು ಇನ್ನೊಂದು ಸಂಸ್ಕೃತಿಗೆ ಒಗ್ಗಿಸುವುದು ಸಂಸ್ಕೃತಿಯ ಬೆಳವಣಿಗೆಯಲ್ಲ. ಸಂಸ್ಕೃತಿ



ಪ್ರೀತಿ, ಗೌರವ, ಅನುಭವ ಮತ್ತು ಸ್ವೀಕಾರದ ಮೂಲಕ ಸಹಜವಾಗಿ ಬೆಳೆಯಬೇಕು. ಇಲ್ಲದಿದ್ದರೆ ಸಂಸ್ಕೃತಿಯಿಂದ ಪಕ್ವಗೊಂಡ ಭಾವನೆಯ ಹಣ್ಣುಗಳು ಸಂಸ್ಕರಿಸಲ್ಪಡದೆ ಕೊಳೆತುಹೋಗುವ ಸಾಧ್ಯತೆ ಇದೆ.

ನಮ್ಮ ದೇಶದ ಸಂಸ್ಕೃತಿ ವಿಶಿಷ್ಟವಾದುದು ಮತ್ತು ಶ್ರೇಷ್ಠವಾದುದು. ನಮ್ಮ ವೇಷ-ಭೂಷಣ, ಭಾಷೆ, ಆಚಾರ-ವಿಚಾರ ಮುಂತಾದವುಗಳು ಅದರ ಪ್ರತೀಕಗಳಾಗಿವೆ. ಆದರೆ ಅವುಗಳನ್ನು ಕೇವಲ ಹೊರಗಿನ ಆಚರಣೆಗಳಿಗೆ ಸೀಮಿತಗೊಳಿಸದೆ, ಅವುಗಳ ಹಿಂದಿರುವ ಮೌಲ್ಯಗಳನ್ನು ಅರ್ಥಮಾಡಿಕೊಳ್ಳಬೇಕು. ಪ್ರಕೃತಿಯನ್ನು ಪೂಜಿಸುವುದರ ಜೊತೆಗೆ ಅದನ್ನು ಸಂರಕ್ಷಿಸಬೇಕು. ಹಿರಿಯರಿಗೆ ಗೌರವ ನೀಡುವುದರ ಜೊತೆಗೆ ಅವರ ಅನುಭವದಿಂದ ಕಲಿಯಬೇಕು. ಹಬ್ಬಗಳನ್ನು ಆಚರಿಸುವುದರ ಜೊತೆಗೆ ಅವುಗಳ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು.



ಸಂಸ್ಕೃತಿಯ ಮೊದಲ ಪಾಠಶಾಲೆ ಕುಟುಂಬ. ಮಕ್ಕಳು ತಂದೆ-ತಾಯಿ ಮತ್ತು ಹಿರಿಯರನ್ನು ನೋಡಿ ಕಲಿಯುತ್ತಾರೆ. ನಾವು ಮಕ್ಕಳಿಗೆ ಏನು ಹೇಳುತ್ತೇವೆ ಎನ್ನುವುದಕ್ಕಿಂತ ನಾವು ಹೇಗೆ ನಡೆದುಕೊಳ್ಳುತ್ತೇವೆ ಎಂಬುದು ಅವರ ಮೇಲೆ ಹೆಚ್ಚಿನ ಪರಿಣಾಮ ಬೀರುತ್ತದೆ. ಮನೆಯಲ್ಲಿ ಪ್ರೀತಿ, ಗೌರವ, ಶಿಸ್ತು, ಸಹಕಾರ ಮತ್ತು ಮಾನವೀಯತೆಯ ವಾತಾವರಣ ನಿರ್ಮಾಣವಾದರೆ ಮಕ್ಕಳು ಸಹಜವಾಗಿಯೇ ಉತ್ತಮ ಸಂಸ್ಕಾರವನ್ನು ಪಡೆದುಕೊಳ್ಳುತ್ತಾರೆ. ಶಾಲೆ ಮತ್ತು ಕಾಲೇಜುಗಳು ಈ ಸಂಸ್ಕಾರಕ್ಕೆ ಜ್ಞಾನ ಹಾಗೂ ಸಾಮಾಜಿಕ ಜವಾಬ್ದಾರಿಯ ಆಯಾಮವನ್ನು ಸೇರಿಸಬೇಕು.

ಮನುಕುಲದ ಉದ್ಧಾರಕ್ಕಾಗಿ, ವಿಶ್ವಕಲ್ಯಾಣಕ್ಕಾಗಿ ಹಾಗೂ ಪ್ರಕೃತಿಯ ಸಂರಕ್ಷಣೆಗಾಗಿ ಶಿಕ್ಷಣ ಮತ್ತು ಸಂಸ್ಕೃತಿ ಪರಸ್ಪರ ಕೈಜೋಡಿಸಬೇಕು. ಶಿಕ್ಷಣ ಮನುಷ್ಯನಿಗೆ ಏನು ತಿಳಿಯಬೇಕು ಎಂಬುದನ್ನು ಕಲಿಸಿದರೆ, ಸಂಸ್ಕೃತಿ ಹೇಗೆ ಬದುಕಬೇಕು ಎಂಬುದನ್ನು ಕಲಿಸುತ್ತದೆ. ಜ್ಞಾನಕ್ಕೆ ವಿವೇಕ, ವಿದ್ಯೆಗೆ ವಿನಯ ಮತ್ತು ಬದುಕಿಗೆ ಮಾನವೀಯತೆ ಸೇರಿದಾಗ ಮಾತ್ರ ಉತ್ತಮ ಸಮಾಜ ನಿರ್ಮಾಣವಾಗುತ್ತದೆ.

ಹೀಗಾಗಿ ಸಂಸ್ಕೃತಿಯ ಶಿಕ್ಷಣವೆಂದರೆ ಕೇವಲ ನಮ್ಮ ಪರಂಪರೆಯನ್ನು ತಿಳಿದುಕೊಳ್ಳುವುದಲ್ಲ. ಅದರಲ್ಲಿರುವ ಉತ್ತಮ ಮೌಲ್ಯಗಳನ್ನು ಅರಿತು, ಅವುಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡು, ಮುಂದಿನ ಪೀಳಿಗೆಗೆ ಅರ್ಥಪೂರ್ಣವಾಗಿ ತಲುಪಿಸುವ ಜವಾಬ್ದಾರಿಯೂ ಹೌದು. ಮನುಷ್ಯನನ್ನು ಕೇವಲ ವಿದ್ಯಾವಂತನನ್ನಾಗಿ ಮಾಡುವ ಶಿಕ್ಷಣಕ್ಕಿಂತ, ವಿವೇಕವಂತ, ಜವಾಬ್ದಾರಿಯುತ, ಮಾನವೀಯ ಮತ್ತು ಸುಸಂಸ್ಕೃತ ವ್ಯಕ್ತಿಯನ್ನಾಗಿ ರೂಪಿಸುವ ಶಿಕ್ಷಣವೇ ನಿಜವಾದ ಶಿಕ್ಷಣ. ಸಂಸ್ಕೃತಿಯು ಮನುಷ್ಯನನ್ನು ಮನುಷ್ಯನಾಗಿ ಬದುಕಲು ಪ್ರೇರೇಪಿಸುವ ದಿವ್ಯಶಕ್ತಿ. ಆ ಶಕ್ತಿಯನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ.

ಲೇಖನ
- ಎನ್. ಬಿ. ಪೂಜಾರಿ.
ಉಪನ್ಯಾಸಕರು
ಶ್ರೀ ಆರ್. ಡಿ. ಪಾಟೀಲ್ ಪಿಯು ಕಾಲೇಜು
ಸಿಂದಗಿ
ಘ: 9972495101



# ಮಂಗಲ ಕಾರ್ಯಾಲಯ, ಅನುಭವ ಮಂಟಪ ನಿರ್ಮಾಣಕ್ಕೆ ಭೂಮಿ ಪೂಜೆ

ಕಲಬುರಗಿ:ನಗರದ ಆಳಂದ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಸ್ವಾಮಿ ವಿವೇಕಾನಂದ ಬಡಾವಣೆಯ ಆರಾಧ್ಯ ದೈವ ಓಂಕಾರೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ ಮುಕ್ತಾಯದ ಸಮಾರಂಭದಲ್ಲಿ ಚಿನ್ಮಯಗಿರಿಯ ವೀರ ಮಹಾಂತ ಶಿವಾಚಾರ್ಯರು ಭಾಗವಹಿಸಿ ಭಕ್ತರ ಆಶಯದಂತೆ ದೇವಸ್ಥಾನದ ಅಡಿಯಲ್ಲಿ ಮಂಗಲ ಕಾರ್ಯಾಲಯ / ಅನುಭವ ಮಂಟಪ ಕಟ್ಟಡ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಶ್ರೀಗಳು ಭಕ್ತರನ್ನು ಕುರಿತು ಆಶೀರ್ವಾದದ ನುಡಿಗಳಲ್ಲಿ ಮಾತನಾಡಿ" ಆಧುನಿಕ ಜೀವನದ ಒತ್ತಡದಲ್ಲಿ ಶ್ರಾವಣ ಮಾಸದಲ್ಲಿ ಒಂದು ತಿಂಗಳವರೆಗೆ ನಡೆಯುವ ಭಜನೆ ಕೀರ್ತನೆ ಪುರಾಣಗಳಲ್ಲಿ ಸರ್ವಭಕ್ತರು ಭಾಗವಹಿಸಿ ಆಧ್ಯಾತ್ಮಿಕತೆಯನ್ನು ಅಳವಡಿಸಿಕೊಂಡು ಜೀವನದಲ್ಲಿ ನೆಮ್ಮದಿಯನ್ನು ಕಾಣಬೇಕು ಎಂದರು.

ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕರಾದ ವೇದಮೂರ್ತಿ ಶಿವಾನಂದಯ್ಯ ಗೊಬ್ಬೂರು ಸ್ವಾಮಿ, ವಿವೇಕಾನಂದ ಬಡಾವಣೆಯ ಸಮಿತಿಯ ಅಧ್ಯಕ್ಷರಾದ ಮಲ್ಲಿನಾಥ ದಂಗಾಪುರ, ಎಸ್.ಆರ್. ಪಾಟೀಲ್ ಅತನೂರು, ಹತಗುಂದಾ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯಗುರು ದೇವೇಂದ್ರಪ್ಪ ಗಣಮುಖಿ, ಜಂಬಗಾ (ಬಿ) ಮುಖ್ಯಗುರು ರಾಜಶೇಖರ್ ಸಜ್ಜಿ, ನಿವೃತ್ತ ಮುಖ್ಯಗುರು ಕೆ. ಬಸವರಾಜ, ಸ್ವಾಮಿ ವಿವೇಕಾನಂದ ಭಜನಾ ಸಂಘದ ಅಧ್ಯಕ್ಷರಾದ ಅಂಬರಾಯ ಬಿರಾದಾರ್, ಶಿಕ್ಷಕ ಅಣ್ಣಾರಾಯ ಮಂಗಾಣಿ ಹಾಗೂ ದೇವಾಲಯದ ಟ್ರಸ್ಟ್ ಸದಸ್ಯರು ಹಾಗೂ ಕಾಲೋನಿಯ ನಿವಾಸಿಗಳು ಉಪಸ್ಥಿತರಿದ್ದರು.



# ಸರ್ಕಾರಿ ಪಿಯು ಕಾಲೇಜಿನಲ್ಲಿ ಪ್ರಜಾಪ್ರಭುತ್ವ ದಿನಾಚರಣೆ

ಕಲಬುರಗಿ : ಜೇವರ್ಗಿ ಪಟ್ಟಣದ ಬಸವೇಶ್ವರ ವೃತ್ತದ ಸಮೀಪದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಎನ್.ಎಸ್.ಎಸ್ ಘಟಕದ ವತಿಯಿಂದ ಮಂಗಳವಾರ ಜರುಗಿದ "ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ" ಯಲ್ಲಿ ಸಾಮೂಹಿಕವಾಗಿ ಸಂವಿಧಾನದ ಪೀಠಿಕೆಯನ್ನು ವಾಚಿಸಿ, ನಂತರ ಮಾನವ ಸರಪಳಿಯನ್ನು ರಚಿಸಿ, ಪ್ರಜಾಪ್ರಭುತ್ವದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲಾಯಿತು. ಕಾಲೇಜಿನ ಪ್ರಾಚಾರ್ಯ ಮಲ್ಲಿಕಾರ್ಜುನ ದೊಡ್ಡಮನಿ, ಎನ್.ಎಸ್.ಎಸ್ ಅಧಿಕಾರಿ ಎಚ್.ಬಿ.ಪಾಟೀಲ್, ಉಪನ್ಯಾಸಕರಾದ ನಯಿಮಾ ನಾಹಿದ್, ಮಲ್ಲಪ್ಪ ರಂಜಣಗಿ, ಗ್ರಂಥಪಾಲಕ ಲಿಂಗರಾಜ ಹಿರೇಗೌಡ, ಅತಿಥಿ ಉಪನ್ಯಾಸಕರಾದ ಅಬ್ದುಲ್ ಸಮದ್, ಸ್ವಾತಿ, ರುಕ್ಸಾನಾ,ದೇವಪ್ಪ, ಶಿಕ್ಷಣ ಪ್ರೇಮಿ ಬಸವರಾಜ ಹಡಪದ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.



**ಕಲಬುರಗಿ: ಜೇವರಗಿ ಪುರಸಭೆಯಲ್ಲಿ ಈ ಹಿಂದೆ ಕೆಲಸ ಮಾಡಿದ 17 ಜನ ಪೌರಕಾರ್ಮಿಕರಿಗೆ ಆದ್ಯತೆಯ ಮೇಲೆ ನೇಮಕಾತಿ ಮಾಡಿಕೊಳ್ಳುವದು ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಇಂದು ಜಿಲ್ಲಾಧಿಕಾರಿ ಕಚೇರಿ ಮುಂದೆ ಜೇವರಗಿ ತಾಲೂಕು ಪೌರ ಕಾರ್ಮಿಕರ ಸಂಘದಿಂದ ಮೈ ಮೇಲೆ ಹೊಲಸು ಮತ್ತು ಕಸ ಸುರಿದುಕೊಂಡು ಪ್ರತಿಭಟನೆ ನಡೆಸಲಾಯಿತು.ಶಂಕರೆಮ್ಮ ಕೊಂಬಿನ್,ಯಲ್ಲಮ್ಮ,ಷಣ್ಮುಕಮ್ಮ,ಶಾರದಮ್ಮ,ರಾಘವೇಂದ್ರ ಸೇರಿದಂತೆ ಹಲವರು ಪಾಲ್ಗೊಂಡರು.**

# ಮುಖ್ಯಮಂತ್ರಿಗಳಿಂದ 1,775.41 ಕೋಟಿ ರೂ. ಮೊತ್ತದ ಕಾಮಗಾರಿಗಳಿಗೆ ಚಾಲನೆ:ಪ್ರಿಯಾಂಕ್ ಖರ್ಗೆ

ಕಲಬುರಗಿ: ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಭಾಗಿಯಾಗಲು ಅಗಮಿಸುತ್ತಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಕಲ್ಯಾಣ ಕರ್ನಾಟಕ ಭಾಗದ 1,775.41 ಕೋಟಿ ರೂ. ಮೊತ್ತದ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ ಎಂದು ರಾಜ್ಯದ ಗೃಹ, ಐ.ಟಿ-ಬಿ.ಟಿ, ಇ-ಆಡಳಿತ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ಬುಧವಾರ ಇಲ್ಲಿನ ಐವಾನ್-ಎ-ಶಾಹಿ ಅತಿಥಿಗೃಹದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಸಂಜೆ ವಿಶೇಷ ವಿಮಾನದ ಮೂಲಕ ಕಲಬುರಗಿಗೆ ಅಗಮಿಸಿ ಸಂಜೆ 7.40 ಗಂಟೆಗೆ ಸಾರ್ವಜನಿಕ ಉದ್ಯಾನವನದಲ್ಲಿ ಆಯೋಜಿಸಿರುವ ಸ್ಟ್ರೀಟ್ ಫೆಸ್ಟಿವಲ್ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ನಂತರ 8.30 ಗಂಟೆಗೆ ಅಪ್ಪ ಕೆರೆ ಕಾಮಗಾರಿಗಳ ಉದ್ಘಾಟನೆ ಮಾಡಿ ವೀಕ್ಷಣೆ ಮಾಡಲಿದ್ದಾರೆ ಎಂದರು.

ಮುಖ್ಯಮಂತ್ರಿಗಳು ಗುರುವಾರ ಬೆಳಿಗ್ಗೆ 8.30 ಗಂಟೆಗೆ ಎಸ್.ವಿ.ಪಿ ವೃತ್ತದಲ್ಲಿರುವ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಪೊಲೀಸ್ ಪರೇಡ್ ಮೈದಾನದಲ್ಲಿ ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಪ್ರದೇಶದ ಜನತೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದರು.ಇದೇ ವೇದಿಕೆಯಲ್ಲಿ ಕಲಬುರಗಿ ಜಿಲ್ಲೆಯ 1,105.63 ಕೋಟಿ



ರೂ. ಮೊತ್ತದ 223 ಕಾಮಗಾರಿಗಳು ಸೇರಿದಂತೆ ಒಟ್ಟಾರೆ ಪ್ರದೇಶದ ಏಳು ಜಿಲ್ಲೆಗಳ 1,071.56 ಕೋಟಿ ರೂ. ವೆಚ್ಚದ 557 ಕಾಮಗಾರಿಗಳಿಗೆ ಅಡಿಗಲ್ಲು, 703.85 ಕೋಟಿ ರೂ. ವೆಚ್ಚದ 244 ಕಾಮಗಾರಿಗಳ ಸೇರಿದಂತೆ ಒಟ್ಟು 1,775.41 ಕೋಟಿ ರೂ. ವೆಚ್ಚದ 801 ಕಾಮಗಾರಿಗಳಿಗೆ ಸಿ.ಎಂ. ಚಾಲನೆ ನೀಡಲಿದ್ದಾರೆ ಎಂದರು.

ಬರ ಘೋಷಣೆಗೆ ಸಂಬಂಧಿಸಿದಂತೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಸಚಿವರು ಎನ್.ಡಿ.ಆರ್.ಎಫ್ ಮಾರ್ಗಸೂಚಿ ಪ್ರಕಾರವೆ ಬರಗಾಲ ಘೋಷಣೆ ಮಾಡಬೇಕಾಗುತ್ತದೆ. ನಿಯಮಾವಳಿ ಸರಳಿಕರಣಕ್ಕೆ ಒತ್ತಾಯ ಮಾಡಿದ್ದು, ಇದುವರೆಗೆ ಕೇಂದ್ರ ಸರ್ಕಾರ ಸ್ಪಂದಿಸಿಲ್ಲ. ಇದರಿಂದ ನಮ್ಮ ರೈತರಿಗೆ ಅನ್ಯಾಯವಾಗುತ್ತಿದೆ. ಇನ್ನು ಎರಡು ವಾರಗಳ ಕಾಲ ಮಳೆ ಸ್ಥಿತಿಗತಿ ನೋಡಿ ಜಿಲ್ಲೆಗಳಿಂದ ವರದಿ ತರಿಸಿಕೊಂಡು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು ಎಂದರು.ಹಿಂದೆ ಯು.ಪಿ.ಎ. ಕಾಲದಲ್ಲಿ ರೈತರ ಸಾಲ ಮನ್ನಾ ಮಾಡಿದ್ದು ನಮ್ಮ ಸರ್ಕಾರ. ಬರಗಾಲ ಘೋಷಣೆ ಮಾಡಬೇಕೆಂಬ ವಿರೋಧ ಪಕ್ಷದವರು ಇಲ್ಲಿ ಅನಗತ್ಯ ಹೋರಾಟ ಮಾಡುತ್ತಿದ್ದಾರೆ. ಇದನ್ನು ತಮ್ಮದೆ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡಿ ಎನ್.ಡಿ.ಆರ್.ಎಫ್ ನಿಯಮಾವಳಿ ಸರಳೀಕರಣ ಮಾಡಿಸಿ ರೈತರಿಗೆ ನ್ಯಾಯ ದೊರಕಿಸಿಕೊಡಲಿ ಎಂದರು.

ತಳವಾರ ಸಮುದಾಯದವರಿಗೆ ಎಸ್.ಟಿ ಪ್ರಮಾಣ ಪತ್ರ ಕುರಿತಂತೆ ಮಾತನಾಡಿದ ಸಚಿವರು, ಕಳೆದ ಬೆಳಗಾವಿ ಅಧಿವೇಶನದಲ್ಲಿ ಅಂದಿನ ಸಿ.ಎಂ. ಸಿದ್ದರಾಮಯ್ಯ ಅವರು ಸಮುದಾಯದ ಮುಖಂಡರೊಂದಿಗೆ ಚರ್ಚಿಸಿಯೇ ಆದೇಶ ಮಾಡಿದ್ದು, ಅದರಂತೆ ಅರ್ಹರಿಗೆ ಎಸ್.ಟಿ. ಪ್ರಮಾಣ ಪತ್ರ ನೀಡಲಾಗುತ್ತಿದೆ. ಇದರಲ್ಲಿ ಯಾವುದೇ ಗೊಂದಲವಿಲ್ಲ. ಹಿಂದೆ ಬಸವರಾಜ ಬೊಮ್ಮಾಯಿ ಸರ್ಕಾರ ಮಾಡಿದ ಗೊಂದಲವನ್ನು ನಮ್ಮ ಸರ್ಕಾರ ಹಂತ ಹಂತವಾಗಿ ಪರಿಹಾರ ಕಲ್ಪಿಸುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಎಂ.ಎಲ್.ಸಿ. ತಿಪ್ಪಣ್ಣಪ್ಪ ಕಮಕನೂರ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ ಇದ್ದರು.

# ಕಲಬುರಗಿ ಮಹಾನಗರ ಪಾಲಿಕೆ:ಮಹಾಪೌರರಾಗಿ ಶೈಕ್ ಅಜ್ಮಲ ಅಹ್ಮದ ಅಫ್ಜಲ್ ಗೋಲಾ,ಉಪ ಮೇಯರ್ ಫರ್ಹಾನಾಜ ಅಧಿಕಾರ ಸ್ವೀಕಾರ

ಕಲಬುರಗಿ: ಕಲಬುರಗಿ ಮಹಾನಗರ ಪಾಲಿಕೆಯ 24ನೇ ಅವಧಿಗೆ ನೂತನ ಮಹಾಪೌರರಾಗಿ ಶೈಕ್ ಅಜ್ಮಲ ಅಹ್ಮದ ಅಫ್ಜಲ್ ಗೋಲಾ ಮತ್ತು ಉಪ ಮಹಾಪೌರರಾಗಿ ಫರ್ಹಾನಾಜ (ಫರ್ಹಾ ಖುಸ್ರೂ ಜಾಗಿರದಾರ) ಅವರು ಮಂಗಳವಾರ ಮಧ್ಯಾಹ್ನ ಪಾಲಿಕೆಯ ಕಚೇರಿಯಲ್ಲಿ ಅಧಿಕಾರ ವಹಿಸಿಕೊಂಡರು. ಈ ಸಂದರ್ಭದಲ್ಲಿ ಮಾತನಾಡಿದ ನೂತನ ಮೇಯರ್ ಅವರು, ನಗರದಲ್ಲಿ ಎದುರಾಗಿರುವ ಕುಡಿಯುವ ನೀರು, ನಾಯಿಗಳ ಹಾವಳಿ ಹಾಗೂ ತ್ಯಾಜ್ಯ ನಿರ್ವಹಣೆ ಮುಂತಾದ ಜ್ವಲಂತ ಸಮಸ್ಯೆಗಳಿಗೆ ಆದ್ಯತೆಯ ಮೇಲೆ ಶೀಘ್ರ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಹೇಳಿದರು.

ತಮ್ಮ ತಂದೆಯವರು 1991ರಲ್ಲಿ ಮೇಯರ್ ಆಗಿದ್ದು, ಸುಮಾರು 35 ವರ್ಷಗಳ ನಂತರ ತಮಗೂ ಅದೇ ಹುದ್ದೆಯಲ್ಲಿ ಸೇವೆ ಸಲ್ಲಿಸುವ ಅವಕಾಶ ಸಿಕ್ಕಿರುವುದು ಅತ್ಯಂತ ಭಾವನಾತ್ಮಕ ಕ್ಷಣವಾಗಿದೆ ಎಂದರು.

ನಗರದ ಸರ್ವಾಂಗೀಣ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ತಿಳಿಸಿದ ಅವರು, ಮಳೆನೀರು ಕೊಯ್ಲು, ಪ್ರತಿಯೊಂದು ಮನೆಗೂ ಸಸಿ ಅಭಿಯಾನ ಮತ್ತು ಪಾಲಿಕೆ ಆಡಳಿತವನ್ನು ಸುಗಮಗೊಳಿಸಲು ಕಂಟ್ರೋಲ್ ಕಮಾಂಡ್ ಸೆಂಟರ್ ಸ್ಥಾಪಿಸುವುದಾಗಿ ತಿಳಿಸಿದರು. ನಿಯಮಿತವಾಗಿ



ಜನೋಪಯೋಗಿ ವಿಷಯಗಳಿಗಷೆಕಿಇ ಮೀಸಲಾದ ಸಾಮಾನ್ಯ ಸಭೆಗಳನ್ನು ನಡೆಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರೇಷ್ಮೆ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಕ್ಷೇತ್ರದ ಶಾಸಕಿ ಕನೀಜ್ ಫಾತಿಮಾ, ವಿಧಾನ ಪರಿಷತ್ ಶಾಸಕ ಜಗದೇವ ಗುತ್ತೇದಾರ, ಜೆಸ್ಕಾಂ ಅಧ್ಯಕ್ಷ ಪ್ರವೀಣ ಪಾಟೀಲ ಹರವಾಳ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಕಿರಣ್ ದೇಶಮುಖ, ಕೆಪಿಸಿಸಿ ಸದಸ್ಯ ಫರಾಜ್ ಉಲ್ ಇಸ್ಲಾಂ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಸಂತೋಷ ಪಾಟೀಲ ದಣ್ಣೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎಸ್ ಬಿ ಆರ್ ಶಾಲೆಯಲ್ಲಿ ಮಕ್ಕಳಿಂದ ಪರಿಸರ ಸ್ನೇಹಿ ಗಣೇಶ ತಯಾರಿಕೆ

ಕಲಬುರಗಿ:ಪ್ರತಿವರ್ಷದಂತೆ ಈ ವರ್ಷವೂ ಗಣೇಶ ಉತ್ಸವಕ್ಕೆ ಶರಣಬಸವೇಶ್ವರ ವಸತಿ ಪಬ್ಲಿಕ್ ಶಾಲೆಯಲ್ಲಿ ಮಕ್ಕಳಿಗೆ ಜೇಡಿ ಮಣ್ಣಿನಿಂದ ಗಣೇಶನ ಮೂರ್ತಿ ತಯಾರಿಸುವುದರ ಮುಖಾಂತರ ಪರಿಸರ ರಕ್ಷಿಸಿ ನಾಡು ಉಳಿಸಿ ಎಂಬ ಸಂದೇಶದೊಂದಿಗೆ ಮಕ್ಕಳಲ್ಲಿ ಒಂದು ಪರಿಸರದ ಬಗ್ಗೆ ಜಾಗೃತಿ ಮೂಡಿಸಲಾಯಿತು ಮತ್ತು ಮಕ್ಕಳಲ್ಲಿ ಇರುವಂತಹ ಕಲೆಗಳನ್ನು ಹೊರ ಹಾಕುವುದು ಇದರ ಉದ್ದೇಶ ಇತ್ತೀಚೆಗೆ ಎಲ್ಲಾ ಕಡೆಯಲ್ಲೂ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಓಪಿ) ಇದರಿಂದ ಗಣೇಶ ವಿಗ್ರಹವನ್ನು ತಯಾರಿಸುತ್ತಿದ್ದಾರೆ ಮತ್ತು ಅದಕ್ಕೆ ಕೃತಕ ಬಣ್ಣವನ್ನು ಸೇರಿಸಿ ಗಣೇಶನ ವಿಗ್ರಹವನ್ನು ತಯಾರಿಸುತ್ತಿದ್ದಾರೆ ಈ ತರಹ ತಯಾರಿಸುವುದರಿಂದ ಬಹಳಷ್ಟು ಪರಿಸರಕ್ಕೆ ಹಾನಿ ಉಂಟಾಗುತ್ತಿದೆ ಆದಕಾರಣ ಮಕ್ಕಳಲ್ಲಿ ಇದರ ಬಗ್ಗೆ ಒಂದು ಅರಿವು ಮೂಡಿಸುವುದು ಹಾಗೂ ನಮ್ಮ ಪರಿಸರವನ್ನು ಕಾಪಾಡುವುದು ನಮ್ಮೆಲ್ಲರ ಕರ್ತವ್ಯ, ಹಾಗಾಗಿ ಮಕ್ಕಳಿಗೆ ಒಂದು ದಿನದ ಕಾರ್ಯಗಾರವನ್ನು ಅಯೋಜಿಸಲಾಯಿತು ಈ ಒಂದು ಕಾರ್ಯಗಾರಕ್ಕೆ ಶಾಲೆಯ ಪ್ರಾಚಾರ್ಯರಾದ ಶ್ರೀ ಎಸ್ ಎಸ್ ದೇವರಕಲ್ ಸರ್ ಇವರು ಮಕ್ಕಳು ತಯಾರಿಸಿರುವ ಪರಿಸರ ಸ್ನೇಹಿ ಗಣೇಶನನ್ನು ನೋಡಿ ಸಂತಸ ವ್ಯಕ್ತಪಡಿಸಿದರು



# 79 ನೇ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ

ಕೆಂಭಾವಿ: ನಿಜಾಮರ ಆಡಳಿತದಿಂದ ವಿಮುಕ್ತಿ ಪಡೆದ ದಿನ ಹೋರಾಟದಲ್ಲಿ ಮಡಿದವರ ಸ್ಮರಣೆ ಮಾಡುವ ದಿನವೇ ಸೆಪ್ಟೆಂಬರ್, 17 ಎಂದು ದಲಿತ ಸಂಘರ್ಷ ಸಮಿತಿ ಭೀಮವಾದ ರಾಜ್ಯ ಸಂಘಟನಾ ಸಂಚಾಲಕ ಶಿವಶರಣಪ್ಪ ವಾಡಿ ಹೇಳಿದರು.

ಪಟ್ಟಣದ ಸಮೀಪವಿರುವ ಮಾಲಹಳ್ಳಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ 79 ನೇ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ದೇಶಕ್ಕೆ ಸ್ವಾತಂತ್ರ್ಯ ಸಿಕ್ಕು 13 ತಿಂಗಳು ತಡವಾಗಿ ಸರ್ದಾರ್ ವಲ್ಲಭಭಾಯ್ ಪಟೇಲ್ ನೇತೃತ್ವದ ಸೈನಿಕ ಕಾರ್ಯಾಚರಣೆ ಹಾಗೂ ಅನೇಕ ಮಹನೀಯರು ತ್ಯಾಗ ಬಲಿದಾನ ಫಲವಾಗಿ ಬೀದರ್, ಕಲಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ವಿಜಯನಗರ ಜಿಲ್ಲೆಗಳು ಭಾರತದ ಒಕ್ಕೂಟದಲ್ಲಿ ವಿಲೀನಗೊಂಡ ಐತಿಹಾಸಿಕ ದಿನವನ್ನು ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯೆಂದು ಆಚರಿಸಲಾಗುತ್ತದೆ ಎಂದರು.

ಮುಖ್ಯ ಶಿಕ್ಷಕ ಮಲ್ಲಣ್ಣ ಕುಂಬಾರ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಶಾಲಾ ಶಿಕ್ಷಕರು, ಗ್ರಾಮ ಪಂಚಾಯಿತಿ ಸದಸ್ಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



# ಸ್ವಾಮಿ ರಾಮಾನಂದ ತೀರ್ಥರ ಸ್ಮಾರಕ ರಾಷ್ಟ್ರೀಯ ಸ್ಮಾರಕವಾಗಿ ಘೋಷಿಸಲಿ

■ ಉದಯರಶ್ಮಿ ದಿನಪತ್ರಿಕೆ


ಸಿಂದಗಿ: ನಗರದಲ್ಲಿರುವ ಸ್ವಾಮಿ ರಾಮಾನಂದ ತೀರ್ಥರ ಸ್ಮಾರಕವನ್ನು ರಾಷ್ಟ್ರೀಯ ಸ್ಮಾರಕವಾಗಿ ಘೋಷಿಸಬೇಕು. ಅವರ ಜನ್ಮದಿನವಾದ ಅಕ್ಟೋಬರ್ 3ರಂದು ರಾಜ್ಯ ಸರ್ಕಾರ ಅಧಿಕೃತವಾಗಿ ಸ್ವಾಮಿ ರಾಮಾನಂದ ತೀರ್ಥ ಜಯಂತಿಯನ್ನು ಆಚರಿಸಬೇಕು. ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಆಚರಿಸುವ ಕುರಿತು ಕೇಂದ್ರ ಸರ್ಕಾರ ಕ್ರಮಕೈಗೊಳ್ಳಬೇಕು ಎಂದು ವಿಜಯಪುರ ಜಿಲ್ಲಾ 371(ಜೆ) ಹೋರಾಟ ಸಮಿತಿ ಮುಖಂಡ ಲಾಯಪ್ಪ ಇಂಗಳೆ ಒತ್ತಾಯಿಸಿದರು.

ಸಿಂದಗಿಯಲ್ಲಿರುವ ಸ್ವಾಮಿ ರಾಮಾನಂದ ತೀರ್ಥರ ಸ್ಮಾರಕ ಭವನದಲ್ಲಿ ಸ್ವಾಮಿ ರಾಮಾನಂದ ತೀರ್ಥ ಸೇವಾ ಸಮಿತಿ ವತಿಯಿಂದ ಹಮ್ಮಿಕೊಂಡ ಹೈದರಾಬಾದ್ ವಿಮೋಚನಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹೈದರಾಬಾದ್ ಪ್ರಾಂತದ ವಿಮೋಚನಾ ಚಳುವಳಿಗೆ ಸ್ವಾಮಿ ರಾಮಾನಂದ ತೀರ್ಥರು ನೀಡಿದ ಕೊಡುಗೆ ಅಪಾರವಾಗಿದೆ. ಹಾಗಾಗಿ ವಿಮೋಚನಾ ದಿನದಂದು ಸ್ವಾಮಿ ರಾಮಾನಂದ ತೀರ್ಥರಿಗೆ ಗೌರವ ಸಲ್ಲಿಸುವಂತೆ ವಿಜಯಪುರ ಜಿಲ್ಲಾಡಳಿತ, ಸಿಂದಗಿ ತಾಲೂಕು ಆಡಳಿತ ಹಾಗೂ ರಾಜ್ಯ ಸರ್ಕಾರಕ್ಕೆ ಮನವಿ ಮಾಡಲಾಗಿತ್ತು. ಆದರೆ, ಸೂಕ್ತ ಗೌರವ ಸಲ್ಲಿಸದೆ ಅಗೌರವ ತೋರಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ವೇಳೆ ರೈತ ಸಂಘದ ಜಿಲ್ಲಾಧ್ಯಕ್ಷ ಸಿದ್ದನಗೌಡ ಪಾಟೀಲ, ಎನ್. ಸುರೇಶಕುಮಾರ, ರಾಷ್ಟ್ರವೀರ ಸ್ವಾಮಿ ರಾಮಾನಂದ ತೀರ್ಥ ಸೇವಾ ಸಮಿತಿ ಅಧ್ಯಕ್ಷ ಅಶೋಕ ಅಲ್ಲಾಪುರ ಮಾತನಾಡಿ, ಹೈದರಾಬಾದ್ ಪ್ರಾಂತ ವಿಮೋಚನಾ ಚಳುವಳಿಯ ಪ್ರಮುಖ ಕಾರಣಿಕರ್ತ ಹಾಗೂ ನೇತಾರರಾಗಿದ್ದ ರಾಷ್ಟ್ರವೀರ ಸ್ವಾಮಿ ರಾಮಾನಂದ ತೀರ್ಥರ ಕೊಡುಗೆಯನ್ನು ಸ್ಮರಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ದೇಶದ ಸ್ವಾತಂತ್ರ ಚಳುವಳಿಗೆ ಮಹತ್ವದ ಕೊಡುಗೆ ನೀಡಿದ ಪ್ರಮುಖ ನಾಯಕರಲ್ಲಿ ಸ್ವಾಮಿ ರಾಮಾನಂದ ತೀಥ–'ರು ಒಬ್ಬರು. ಅವರ ಸೇವೆ ಹಾಗೂ ಹೋರಾಟದ ಇತಿಹಾಸವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ. ಮತ್ತು ಸಿಂದಗಿಯಲ್ಲಿರುವ ಅವರ ಸ್ಮಾರಕವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಬೇಕು ಎಂದು ಆಗ್ರಹಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ: ಸಿದ್ದನಗೌಡ ಪಾಟೀಲ ಮಾತನಾಡಿದರು.

ಕಾರ್ಯಕ್ರಮದಲ್ಲಿ ರಂಗರಾವ ಖೇಡಗಿ, ಸಮಿತಿಯ ಕಾರ್ಯದರ್ಶಿ ಪ್ರದೀಪ ದೇಶಪಾಂಡೆ, ವಿನೋದ ಖೇಡ, ಕಲ್ಲಪ್ಪ ಶಿವಶರಣ, ಚಂದ್ರಶೇಖರ ಹೊಸಮನಿ, ಬಸವರಾಜ ಕುಂಬಾರ, ಧರ್ಮಣ್ಣ ಗಬಸಾವಳಗಿ, ಬಸನಗೌಡ ಧರ್ಮಗೊಂಡ, ಶಿವಪ್ಪ ಸುಲ್ಪಿ, ಎಂ.ಎಚ್. ಪಟೇಲ, ರಮೇಶ ದೊಡಮನಿ, ಶಬ್ಬೀರ ಪಟೇಲ ಬಿರಾದಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಪ್ರಧಾನಿ ಮೋದಿ ಜನ್ಮದಿನ ಪ್ರಯುಕ್ತ ಅಭಿಮಾನಿಗಳಿಂದ ಪೂಜೆ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ದೇಶದ ಪ್ರಧಾನಿ ನರೇಂದ್ರ ಮೋದಿ ಜನ್ಮದಿನದ ಅಂಗವಾಗಿ ಬಿಜೆಪಿ ಕಾರ್ಯಕರ್ತರು ಹಾಗೂ ಅವರ ಅಭಿಮಾನಿಗಳು ಪಟ್ಟಣದ ಕಲ್ಮೇಶ್ವರನಿಗೆ ಅಭಿಷೇಕ ನೆರವೇರಿಸಿ ಪೂಜೆ ಸಲ್ಲಿಸುವುದರ ಮೂಲಕ ಅವರ ಆಯುಷ್ಯ, ಆರೋಗ್ಯ, ಯಶಸ್ಸಿಗಾಗಿ ಪ್ರಾರ್ಥಿಸಿದರು.

ಪಟ್ಟಣದ ಕಲ್ಮೇಶ್ವರ ದೇವಸ್ಥಾನಕ್ಕೆ ಗುರುವಾರ ಬೆಳಿಗ್ಗೆ 6 ಗಂಟೆಗೆ ಆಗಮಿಸಿದ ಬಿಜೆಪಿ ಕಾರ್ಯಕರ್ತರು ಹಾಗೂ ನರೇಂದ್ರ ಮೋದಿಜೀಯವರ ಅಭಿಮಾನಿಗಳು ಶಾಸ್ತ್ರೋಕ್ತವಾಗಿ ಅಭಿಷೇಕ ನೆರವೇರಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಕಾರ್ಯದರ್ಶಿ ರಮೇಶ ಮಸಬಿನಾಳ, ಜಂಗಮಾಭಿವೃದ್ಧಿ ಸಂಘದ ತಾಲ್ಲೂಕು ಅಧ್ಯಕ್ಷ ಸೋಮಶೇಖರ ಹಿರೇಮಠ, ಯುವ ಮೋರ್ಚಾ ಉಪಾಧ್ಯಕ್ಷ ಕಲ್ಮೇಶ ಬುದ್ನಿ, ಮಂಡಲ ಪ್ರಧಾನ ಕಾರ್ಯದರ್ಶಿ ಮಹಾಂತೇಶ ಬಿರಾದಾರ(ಡೋಣಿ ಬೂದಿಹಾಳ) ಮಾತನಾಡಿ, ಮೋದಿಯವರು ದೇಶ ಕಂಡ ಪ್ರಧಾನಿಗಳಲ್ಲಿ ತಮ್ಮ ವಿಚಾರಧಾರೆ, ಯೋಜನೆಗಳಿಂದ ವಿಶಿಷ್ಟ ಹಾಗೂ ವಿಭಿನ್ನ ಸ್ಥಾನವನ್ನು ಹೊಂದಿದ್ದಾರೆ. ಅವರ ನಾಯಕತ್ವದಲ್ಲಿ ದೇಶ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದೆ. ಮೋದಿಜೀ ಇಂದು ವಿಶ್ವದ ಎಲ್ಲ ದೇಶಗಳ ನಾಯಕರ ವಿಶ್ವಾಸರ್ಹತೆ ಹೊಂದಿದ ಏಕೈಕ ನಾಯಕರಾಗಿ ಗುರುತಿಸಲ್ಪಟ್ಟಿದ್ದಾರೆ. ಇಂಥ ವ್ಯಕ್ತಿಯ ನಾಯಕತ್ವ ದೇಶಕ್ಕೆ ಇನ್ನೂ ಅಗತ್ಯವಾಗಿದೆ. ಆದ್ದರಿಂದ ಇವರ ನಾಯಕತ್ವದಲ್ಲಿ ದೇಶ ಇನ್ನೂ ಹೆಚ್ಚಿನ ಪ್ರಗತಿ ಕಾಣಲಿ ಎಂದು ಪ್ರಾರ್ಥಿಸಿದರು.

ಶ್ರೀಶೈಲ ಯಂಭತ್ನಾಳ, ಚೇತನ ಇಂಡಿ, ಶಿವರಾಜ ತಳವಾರ, ರಮೇಶ ಈಳಗೇರ, ಮಲ್ಲಿಕಾರ್ಜುನ ಜಡಿಮಠ, ವಿಠ್ಠಲ ಯಂಕಂಚಿ, ಮಲ್ಲು ಬಾಗೇವಾಡಿ, ಹಣಮಂತ ಹೀರಾಪೂರ, ಪ್ರವೀಣ ದೇಸಾಯಿ, ಬಾಪುಗೌಡ ಪಾಟೀಲ, ಸುಮೀತ್ ಬುದ್ನಿ, ರಾಘವೇಂದ್ರ ಸಬ್ಬಸಗಿ, ವಿಶಾಲ್ ಭಾಸುತ್ಕರ, ಚಿನ್ನು ದಾನಗೊಂಡ, ಸಾಗರ ತೋಟದ, ಸುರೇಶ ಕುಂಬಾರ, ಇದ್ದರು.

## ಚಡಚಣದ ಪ್ರಮುಖ ಬೀದಿಗಳಲ್ಲಿ ಪೊಲೀಸರಿಂದ ಜಾಗೃತಿ ಮೆರವಣಿಗೆ

# ಗಣೇಶ ವಿಸರ್ಜನೆ ವೇಳೆ ಶಾಂತಿ ಕಾಪಾಡಿ: ಪೊಲೀಸರ ಎಚ್ಚರಿಕೆ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಗಣೇಶೋತ್ಸವದ ವಿಸರ್ಜನಾ ಮೆರವಣಿಗೆಯನ್ನು ಶಾಂತಿ, ಸೌಹಾರ್ದತೆ ಹಾಗೂ ಸಂಭ್ರಮದಿಂದ ಆಚರಿಸುವಂತೆ ಮತ್ತು ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಚಡಚಣ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಪೊಲೀಸ್ ಸಿಬ್ಬಂದಿಯಿಂದ ಗುರುವಾರ ಜಾಗೃತಿ ಮೆರವಣಿಗೆ ನಡೆಸಲಾಯಿತು.

ಚಡಚಣ ಸಿಪಿಐ ಪರಶುರಾಮ ಮನಗೂಳಿ ಹಾಗೂ ಪಿಎಸ್ಐ ಅರವಿಂದ ಅಂಗಡಿ ಅವರ ನೇತೃತ್ವದಲ್ಲಿ ನಡೆದ ಜಾಗೃತಿ ಮೆರವಣಿಗೆಯಲ್ಲಿ ಗಣೇಶೋತ್ಸವ ಸಮಿತಿಗಳ ಮುಖಂಡರು ಹಾಗೂ ಸಾರ್ವಜನಿಕರು ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸಹಕರಿಸುವಂತೆ ಪೊಲೀಸರು ಮನವಿ ಮಾಡಿದರು.

ವಿಸರ್ಜನಾ ಮೆರವಣಿಗೆ ಸಂದರ್ಭದಲ್ಲಿ ಸಾರ್ವಜನಿಕರಿಗೆ ಕಿರಿಕಿರಿ ಉಂಟುಮಾಡುವ ರೀತಿಯಲ್ಲಿ ಧ್ವನಿವರ್ಧಕಗಳನ್ನು ಬಳಸಬಾರದು. ಡಿಜೆಗಳಲ್ಲಿ ಇಂಪಾದ ಹಾಗೂ ಮನರಂಜನಾತ್ಮಕ ಹಾಡುಗಳನ್ನು ಮಾತ್ರ ಪ್ರಸಾರ ಮಾಡಬೇಕು. ಯಾವುದೇ ಕೋಮು ಪ್ರಚೋದಕ, ಅಶಾಂತಿಗೆ ಕಾರಣವಾಗುವ ಅಥವಾ ಭಾವನೆಗಳಿಗೆ ಧಕ್ಕೆ ತರುವ ಹಾಡುಗಳನ್ನು ಪ್ರಸಾರ ಮಾಡಬಾರದು ಎಂದು ಗಣೇಶೋತ್ಸವ ಸಮಿತಿಗಳ ಮುಖಂಡರಿಗೆ ಪೊಲೀಸರು ಸ್ಪಷ್ಟ ಎಚ್ಚರಿಕೆ ನೀಡಿದರು. ನಿಯಮಗಳನ್ನು ಉಲ್ಲಂಘಿಸಿ ಡಿಜೆ ಹಾಗೂ ಧ್ವನಿವರ್ಧಕಗಳನ್ನು ಬಳಸಿದಲ್ಲಿ ಡಿಜೆ ಮತ್ತು ಸೌಂಡ್ ಸಿಸ್ಟಮ್‌ಗಳನ್ನು ಜಪ್ತಿ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸಿಪಿಐ ಪರಶುರಾಮ ಮನಗೂಳಿ ಹಾಗೂ ಪಿಎಸ್ಐ ಅರವಿಂದ ಅಂಗಡಿ ಎಚ್ಚರಿಸಿದರು.

ಪಟ್ಟಣದ ವಾರ್ಡ್ ನಂ.7ರಲ್ಲಿ 20*20*20 ಅಡಿ ವಿಸ್ತೀರ್ಣದ ಗಣೇಶ ವಿಸರ್ಜನಾ ಹೊಂಡವನ್ನು ನಿರ್ಮಿಸಲಾಗಿದೆ. ಸಾರ್ವಜನಿಕರು ಹಾಗೂ ಗಣೇಶೋತ್ಸವ ಸಮಿತಿಗಳು ಗಣೇಶ ಮೂರ್ತಿಗಳ ವಿಸರ್ಜನೆಯನ್ನು ಇದೇ ಹೊಂಡದಲ್ಲಿ ನಡೆಸುವಂತೆ ಪೊಲೀಸರು ಸೂಚಿಸಿದರು.

ಗಣೇಶೋತ್ಸವವು ಎಲ್ಲರ ಹಬ್ಬವಾಗಿದ್ದು, ಪರಸ್ಪರ ಸಹೋದರತ್ವ, ಶಾಂತಿ ಮತ್ತು ಸೌಹಾರ್ದತೆ ಕಾಪಾಡಿಕೊಂಡು ವಿಸರ್ಜನಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಪೊಲೀಸರು ಮನವಿ ಮಾಡಿದರು.

# ಯತ್ನಾಳರು ಆಧಾರ ರಹಿತ ಟೀಕೆ ಮಾಡುವುದನ್ನು ನಿಲ್ಲಿಸಲಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಮ್ಮ ಇಡೀ ಜೀವನವನ್ನೇ ಭಾರತೀಯ ಜನತಾ ಪಕ್ಷ ಸಂಘಟನೆಗಾಗಿ ಮುಡುಪಾಗಿರಿಸಿದ್ದಾರೆ, ದಕ್ಷಿಣ ಭಾರತದಲ್ಲಿ ಬಿಜೆಪಿ ಅಧಿಕಾರಕ್ಕೆ ತರುವಲ್ಲಿ ಅವರ ಪಾತ್ರ ಪ್ರಮುಖ ಎಂಬುದು ಇಡೀ ಕಾರ್ಯಕರ್ತ ಬಂಧುಗಳಿಗೆ ಗೊತ್ತಿದೆ, ಶಾಸಕ ಯತ್ನಾಳರು ಆಧಾರ ರಹಿತ ಟೀಕೆ ಮಾಡಿದರೆ ಯಡಿಯೂರಪ್ಪ ಅವರ ವ್ಯಕ್ತಿತ್ವಕ್ಕೆ ಯಾವ ಧಕ್ಕೆಯೂ ಆಗುವುದಿಲ್ಲ, ಯಡಿಯೂರಪ್ಪ ಅವರ ಬಗ್ಗೆ ಹಾಗೂ ಪಕ್ಷದ ರಾಜ್ಯಾಧ್ಯಕ್ಷ ವಿಜಯೇಂದ್ರ ಬಗ್ಗೆ ಮಾತನಾಡುವುದನ್ನು ಶಾಸಕ ಯತ್ನಾಳ ಅವರು ನಿಲ್ಲಿಸಲಿ ಎಂದು ನಗರಸಭೆ ಮಾಜಿ ಅಧ್ಯಕ್ಷ ಪರಶುರಾಮಸಿಂಗ್ ರಜಪೂತ ಹೇಳದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಿ.ಎಸ್. ಯಡಿಯೂರಪ್ಪ ಎಂದರೆ ಅವರು ಮಾಸ್ ಲೀಡರ್. ಇಡೀ ರಾಜ್ಯ ಅಷ್ಟೇ ಅಲ್ಲ ರಾಷ್ಟ್ರಕ್ಕೆ ಅವರ ಹೆಸರು ಚಿರಪರಿಚಿತವಾಗಿದೆ, ಕೃಷಿ ಬಜೆಟ್ ಮೊದಲಾದ ಐತಿಹಾಸಿಕ ನಿರ್ಧಾರ ಕೈಗೊಂಡ ಬಿ.ಎಸ್. ಯಡಿಯೂರಪ್ಪ ಅವರ ಬಗ್ಗೆ ಮಾತನಾಡಲು ಯಾವ ನೈತಿಕತೆ ಸಹ ಶಾಸಕರಿಗೆ ಇಲ್ಲ. ಯತ್ನಾಳರು ಎಷ್ಟೋ ನೋವು ನೀಡಿದರೂ ಸಹ ಮಗನ ಸಮಾನ ಎಂದು ತಿಳಿದು ಓರ್ವ ತಂದೆಯ ಸ್ಥಾನದಲ್ಲಿ ನಿಂತು ಪುನಃ ಯಡಿಯೂರಪ್ಪ ಸಾಹೇಬರು ಅವರನ್ನು ಪಕ್ಷಕ್ಕೆ ಬರ ಮಾಡಿಕೊಂಡರು, ಆಗ ಯತ್ನಾಳರೇ ಯಡಿಯೂರಪ್ಪ ಅವರನ್ನು ತಮ್ಮ ಗುರು ಎಂದು ಹೇಳಿದ್ದೂ ಇದೆ, ಈಗ ಅವರ ವಿರುದ್ಧವೇ ವಾಗ್ದಾಳಿ ನಡೆಸುವುದು, ಅವರ ಕಾರ್ ಡಿಸೇಲ್ ಹಾಕಿಸಿದ್ದು ನಾನೇ ಎಂದು ತಲೆ ಬುಡವಿಲ್ಲದ ಹೇಳಿಕೆ ನೀಡುವುದು ಯತ್ನಾಳ ಅವರ ಕೀಳು ಮಟ್ಟದ ವ್ಯಕ್ತಿತ್ವ ತೋರಿಸುತ್ತದೆ, ಬಿ.ವೈ. ವಿಜಯೇಂದ್ರ ಯುವಕರು, ಪಕ್ಷ ರಾಜ್ಯಾಧ್ಯಕ್ಷರಾಗಿ ತಮ್ಮದೇ ರೀತಿ ಪಕ್ಷವನ್ನು ಉತ್ಸಾಹದಿಂದ ಸಂಘಟನೆ ಮಾಡುತ್ತಿದ್ದಾರೆ, ಹೀಗಾಗಿ ಮತ್ತೊಮ್ಮೆ ಬಿಜೆಪಿ ಅಧಿಕಾರಕ್ಕೆ ಬರಲಿದೆ, ನಾನು ಸಹ ಬಿಜೆಪಿಯಲ್ಲಿಯೇ ಇರಬೇಕು ಎಂಬ ಹತಾಶ ಭಾವನೆಯಿಂದ ಹಾಗೂ ಮತ್ತೆ ಹೇಗಾದರೂ ಮಾಡಿ ಪಕ್ಷಕ್ಕೆ ಸೇರಲು ಯತ್ನಾಳ ಈ ನಾಟಕ ಮಾಡುತ್ತಿದ್ದಾರೆ ಎಂದು ರಜಪೂತ ಹೇಳಿದ್ದಾರೆ.

ಹಿಂದುತ್ವದ ಪಾಠ ಯತ್ನಾಳರಿಂದ ಕಲಿಯಬೇಕಿಲ್ಲ, ನಾನು ಹಿಂದೂತ್ವವಾದಿ,ಇತರ ಧರ್ಮೀಯರನ್ನು ತೆಗಳಲು ಹಿಂದೂ ಸಂಸ್ಕೃತಿ ಅನುಮತಿ ನೀಡಲ್ಲ, ಹಿಂದೂತ್ವದ ಸಂಸ್ಕೃತಿ ಬಹುತ್ವದ ಸಂಗತಿ, ಎಲ್ಲರನ್ನೂ ಭಾವೈಕ್ಯತೆಯಿಂದ ಕಾಣುವ ಸಂಸ್ಕೃತಿ, ಈ ಸಂಸ್ಕೃತಿ ವಿರುದ್ಧವಾಗಿ ನಡೆದುಕೊಳ್ಳುತ್ತಿರುವ ಯತ್ನಾಳ ಅವರು ಹೇಗೆ ಹಿಂದೂ ನಾಯಕರಾಗಲು ಸಾಧ್ಯ ಎಂದು ರಜಪೂತ ಪ್ರಶ್ನಿಸಿದ್ದಾರೆ.

## ಇಂಡಿಯಲ್ಲಿ ವಿಶಾಲ ಸೌಹಾರ್ದ ಪತ್ತಿನ ಸಹಕಾರಿ ಸಂಘದ 12ನೇ ಶಾಖೆ ಉದ್ಘಾಟನೆ

# ನಂಬಿಕೆಯೇ ಸಹಕಾರಿ ಸಂಸ್ಥೆಗಳ ಯಶಸ್ಸಿನ ಮೂಲ :ನಿರಾಣಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಸ್ಥಳೀಯ ಗ್ರಾಮೀಣ ಹಾಗೂ ನಗರ ಪ್ರದೇಶದ ಜನರಿಗೆ ಆರ್ಥಿಕ ಶಕ್ತಿ ತುಂಬುವ ಮತ್ತು ಸಹಕಾರಿ ಕ್ಷೇತ್ರದ ಬೆಳವಣಿಗೆಗೆ ಪೂರಕವಾಗುವ ನಿಟ್ಟಿನಲ್ಲಿ, ಇಂಡಿ ನಗರದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶಾಲ ಸೌಹಾರ್ದ ಪತ್ತಿನ ಸಹಕಾರಿ ಸಂಘದ 12ನೇ ಶಾಖೆಯ ಉದ್ಘಾಟನಾ ಸಮಾರಂಭವು ಅತ್ಯಂತ ಯಶಸ್ವಿಯಾಗಿ ಜರುಗಿತು.

ಕಾರ್ಯಕ್ರಮದ ಸಾನಿಧ್ಯವನ್ನು ಶಿರಶ್ಯಾಡ ಹಿರೇಮಠದ ಅಭಿನವ ಮುರುಘೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಿ ಆಶೀರ್ವಚನ ನೀಡಿ, "ಸಹಕಾರ ಮನೋಭಾವನೆ ಮತ್ತು ನಂಬಿಕೆಯೇ ಸಹಕಾರಿ ಸಂಸ್ಥೆಗಳ ಯಶಸ್ಸಿನ ಮೂಲ ಮಂತ್ರ. ಈ ಸಂಸ್ಥೆಯು ಸಾರ್ವಜನಿಕರ ಆರ್ಥಿಕ ಪ್ರಗತಿಗೆ ನಿರಂತರವಾಗಿ ಶ್ರಮಿಸಲಿ" ಎಂದು ಶ್ರೀಗಳು ಆಶೀರ್ವದಿಸಿದರು.

ಸಹಕಾರಿ ಸಂಘದ ನೂತನ ಶಾಖೆಯನ್ನು ಉದ್ಘಾಟಿಸಿ ಮಾತನಾಡಿದ ಮಾಜಿ ಸಚಿವ ಮುರುಗೇಶ್ ನಿರಾಣಿ, "ಸಹಕಾರಿ ಕ್ಷೇತ್ರವು ಕೇವಲ ಹಣಕಾಸು ವಹಿವಾಟಿಗೆ ಸೀಮಿತವಾಗಿರದೆ, ಸಾಮಾನ್ಯ ಜನರ ಬದುಕಿಗೆ ಆಸರೆಯಾಗಬೇಕು. ವಿಶಾಲ ಸೌಹಾರ್ದ ಸಹಕಾರಿ ಸಂಘವು ಮುಂಬರುವ ದಿನಗಳಲ್ಲಿ ಇಂಡಿ ಭಾಗದ ರೈತರು, ಸಣ್ಣ ವ್ಯಾಪಾರಿಗಳು ಮತ್ತು ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಭದ್ರ ಬುನಾದಿ ಹಾಕಲಿದೆ. ಈ 12ನೇ ಶಾಖೆಯು ಗ್ರಾಹಕರಿಗೆ ಅತ್ಯುತ್ತಮ, ಪಾರದರ್ಶಕ ಹಾಗೂ ಗುಣಮಟ್ಟದ ಬ್ಯಾಂಕಿಂಗ್ ಸೇವೆಗಳನ್ನು ನೀಡುವ ಮೂಲಕ ಈ ಭಾಗದ ಜನರ ವಿಶ್ವಾಸ ಗಳಿಸಲಿದೆ" ಎಂದು ಆಶಯ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಇಂಡಿ ಮತಕ್ಷೇತ್ರದ ಶಾಸಕ ಯಶವಂತರಾಯಗೌಡ ಪಾಟೀಲ ಅವರು ಮಾತನಾಡಿ, "ಇಂಡಿ ನಗರಕ್ಕೆ ಇಂತಹ ಪ್ರಮುಖ ಸಹಕಾರಿ ಸಂಸ್ಥೆಗಳ ಅವಶ್ಯಕತೆ ಹೆಚ್ಚಾಗಿದೆ. ಮುರುಗೇಶ್ ನಿರಾಣಿ ಅವರ ನೇತೃತ್ವದಲ್ಲಿ ಸಂಸ್ಥೆಯು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ನಮ್ಮ ಭಾಗದ ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು. ಮುಂಬರುವ ದಿನಗಳಲ್ಲಿ ಈ ಸಂಸ್ಥೆಯ ಬೆಳವಣಿಗೆಗೆ ನಮ್ಮ ಸಂಪೂರ್ಣ ಸಹಕಾರ ಇರಲಿದ್ದು, ಸ್ಥಳೀಯರಿಗೆ ಹೆಚ್ಚು ಉದ್ಯೋಗ ಹಾಗೂ ಆರ್ಥಿಕ ಸೌಲಭ್ಯಗಳು ಸಿಗುವಂತಾಗಲಿ" ಎಂದು ಹಾರೈಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕ ಡಾ. ಸಾರ್ವಭೌಮ ಬಗಲಿ ಅವರು, ಇಂಡಿ ನಗರದಲ್ಲಿ ಈ ಸಂಸ್ಥೆಯು ಆರಂಭವಾಗಿರುವುದು ಸಂತಸ ತಂದಿದೆ. ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಸುಲಭ ಸಾಲ ಸೌಲಭ್ಯ ನೀಡುವ ಮೂಲಕ ಸಂಸ್ಥೆ ಮತ್ತಷ್ಟು ಬೆಳೆಯಲಿ ಎಂದು ಶುಭ ಕೋರಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ ಶಹಾಪುರ ಮಾತನಾಡಿ, ಸಹಕಾರಿ ರಂಗದಲ್ಲಿ ಉತ್ತರ ಕರ್ನಾಟಕ ಭಾಗದಲ್ಲಿ ನಿರಾಣಿ ಅವರ ಕೊಡುಗೆ ದೊಡ್ಡದಾಗಿದ್ದು, ಈ ಶಾಖೆಯು ಸ್ಥಳೀಯರ ಆರ್ಥಿಕ ಅಗತ್ಯತೆಗಳನ್ನು ಪೂರೈಸಲಿದೆ ಎಂದರು. ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಸೌಮ್ಯ ಕಲ್ಲೂರ, ಪ್ರಮುಖರಾದ ಮಂಜುನಾಥ ವಂದಾಲ, ಸಂಸ್ಥೆಯ ನಿರ್ದೇಶಕ ಹಾಗೂ ವಿಧಾನಪರಿಷತ್ ಸದಸ್ಯ ಹಣಮಂತ ನಿರಾಣಿ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಶಂಕರಗೌಡ ಪಾಟೀಲ, ಬಿ.ಡಿ. ಪಾಟೀಲ, ಕಾಸುಗೌಡ ಬಿರಾದಾರ ಮಾತನಾಡಿದರು.

ಅನೀಲ ಏಳಗಿ, ಅನೀಲ ಜಮಾದಾರ, ಸೋಮು ನಿಂಬರಗಿಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಅನುದಾನ :ಶಾಸಕ ಮನಗೂಳಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಸಮಾಜದ ಅತ್ಯಂತ ಶ್ರೇಷ್ಠ ವ್ಯಕ್ತಿಗಳ ಸಾಲಿನಲ್ಲಿ ಶಿಕ್ಷಕರು ನಿಲ್ಲುತ್ತಾರೆ. ಶಿಕ್ಷಕರು ಕೇವಲ ಶಿಕ್ಷಣ ನೀಡುವುದಲ್ಲದೆ, ಮಕ್ಕಳಿಗೆ ಸಂಸ್ಕಾರ ಹಾಗೂ ಬದುಕಿನ ಮೌಲ್ಯಗಳನ್ನು ಕಲಿಸುವ ಮಹತ್ತರ ಜವಾಬ್ದಾರಿ ಹೊಂದಿದ್ದಾರೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ನಗರದ ಗುಂದಗಿ ಫಂಕ್ಷನ್ ಹಾಲ್‌ನಲ್ಲಿ ಜಿಲ್ಲಾ ಪಂಚಾಯಿತಿ, ಸಾರ್ವಜನಿಕ ಶಿಕ್ಷಣ ಇಲಾಖೆ ವಿಜಯಪುರ, ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಮತ್ತು ಶಿಕ್ಷಕರ ದಿನೋತ್ಸವ ಸಮಿತಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ 138ನೇ ಜನ್ಮದಿನಾಚರಣೆ ಹಾಗೂ ಶಿಕ್ಷಕರ ದಿನೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇಡೀ ಜೀವನವನ್ನು ಮಕ್ಕಳ ಶ್ರೇಯೋಭಿವೃದ್ಧಿಗೆ ಮುಡುಪಾಗಿಟ್ಟ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ವಿಶ್ವವಿದ್ಯಾಲಯದ ಕುಲಪತಿಯಾಗಿ, ಪ್ರಾಧ್ಯಾಪಕರಾಗಿ, ದೇಶದ ಉಪರಾಷ್ಟ್ರಪತಿಯಾಗಿ ಹಾಗೂ ರಾಷ್ಟ್ರಪತಿಯಾಗಿ ಸೇವೆ ಸಲ್ಲಿಸುವ ಮೂಲಕ ಶಿಕ್ಷಕ ಸಮೂಹಕ್ಕೆ ದಾರಿದೀಪವಾಗಿದ್ದಾರೆ. ಶಿಕ್ಷಣ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು. ಶಾಲಾ ಕಟ್ಟಡಗಳು ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಲು ವಿಶೇಷ ಅನುದಾನ ಕಲ್ಪಿಸುವ ಮೂಲಕ ಕ್ಷೇತ್ರದ ಅಭಿವೃದ್ಧಿಗೆ ಮುನ್ನುಡಿ ಬರೆಯಲಾಗುವುದು ಎಂದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಯರನಾಳ ಸಂಸ್ಥಾನ ವಿರಕ್ತಮಠದ ಗುರು ಸಂಗನಬಸವ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ದಿ. ಎಂ.ಸಿ.ಮನಗೂಳಿ ಪ್ರತಿಷ್ಠಾನ ವತಿಯಿಂದ ತಾಲೂಕಿನ ಶಿಕ್ಷಕರಿಗೆ ಬ್ಯಾಗ್‌ಗಳನ್ನು ವಿತರಿಸಲಾಯಿತು. ಅಲ್ಲದೆ, 120 ಜನ ನಿವೃತ್ತ ಶಿಕ್ಷಕರು, ಮೃತ ಶಿಕ್ಷಕರ ಕುಟುಂಬದ ಸದಸ್ಯರನ್ನು ಹಾಗೂ 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100ರಷ್ಟು ಫಲಿತಾಂಶ ದಾಖಲಿಸಿರುವ 42 ಪ್ರೌಢಶಾಲೆಗಳ ಮುಖ್ಯಸ್ಥರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ 9 ಗಂಟೆಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಿಂದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರವನ್ನು ಸಾರೋಟಿನಲ್ಲಿ ಇರಿಸಿ, ವಾದ್ಯಮೇಳಗಳೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು.

ವೇದಿಕೆಯ ಮೇಲೆ ತಾಪಂ ಅಧಿಕಾರಿ ಅನೀಲ ಹಳ್ಳಿ, ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಸಂತೋಷ ಸಾಲಿ, ಬಸವರಾಜ ತೆಲ್ಲೂರ, ಸಾಹೇಬಗೌಡ ಬಿರಾದಾರ, ಕ್ಷೇತ್ರ ಸಮನ್ವಯಾಧಿಕಾರಿ ಐ.ಎಸ್. ಟಕ್ಕೆ, ಶಿಕ್ಷಕರ ಸಂಘದ ತಾಲೂಕಾಧ್ಯಕ್ಷೆ ಎಸ್.ಎಂ. ಚಿಗರಿ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಆರ್.ಎಚ್. ಬಿರಾದಾರ, ನೌಕರರ ಸಂಘದ ಅಧ್ಯಕ್ಷ ಅಶೋಕ ತೆಲ್ಲೂರ, ಮಹಾಮಂಡಲದ ಅಧ್ಯಕ್ಷ ಅರುಣ ನಾಯ್ಕೋಡಿ, ಅನುದಾನಿತ ಪ್ರೌಢಶಾಲೆಗಳ ಅಧ್ಯಕ್ಷ ಶಿವಪುತ್ರ ಕಿರನಳ್ಳಿ, ಶಿಕ್ಷಣ ಸಂಯೋಜಕ ಹಾಗೂ ಅಕ್ಷರ ದಾಸೋಹ ಅಧಿಕಾರಿ ಎ.ಎಸ್. ಡೋಣೂರ, ದೈಹಿಕ ಶಿಕ್ಷಣ ಪರಿವೀಕ್ಷಕ ರಮೇಶ ಬಿರಾದಾರ, ಶಿಕ್ಷಕರಾದ ರವಿ ಬಿರಾದಾರ, ಶಿಕ್ಷಕಿಯರಾದ ಜಯಶ್ರೀ ಬೆಣ್ಣಿ, ಜಯಶ್ರೀ ನಾಯಕ, ಬಸಮ್ಮ ಬಜಂತ್ರಿ ಸೇರಿದಂತೆ ಹಲವರು ವೇದಿಕೆಯಲ್ಲಿದ್ದರು.

ಆದರ್ಶ ವಿದ್ಯಾಲಯದ ವಿದ್ಯಾರ್ಥಿನಿಯರು ಪ್ರಾರ್ಥನೆ ಹಾಗೂ ನಾಡಗೀತೆ ಹಾಡಿದರು. ಶಿಕ್ಷಕ ಜಗದೀಶ ಸಿಂಗೆ ಶಿಕ್ಷಕರ ಗೀತೆ ಹಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಟಿ.ಎಸ್. ಆಲಗೂರ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು.

ಶಿಕ್ಷಕ ಶರಣು ಲಂಗೋಟಿ ನಿರೂಪಿಸಿದರು. ದೇವರ ಹಿಪ್ಪರಗಿ ಅಧ್ಯಕ್ಷ ಪಿ.ಸಿ. ತಳಕೇರಿ ವಂದಿಸಿದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR